ಸಂಪುಟ 01 | ಸಂಚಿಕೆ 86 | ಬುಧವಾರ 11 ಫೆಬ್ರವರಿ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ
REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**01) ವಿಶ್ವ ಯುನಾನಿ ದಿನ**

ಭಾರತದಲ್ಲಿ ಯುನಾನಿ ವೈದ್ಯಕೀಯದ ಪ್ರವರ್ತಕ ಎಂದು ವ್ಯಾಪಕವಾಗಿ ಪರಿಗಣಿಸಲ್ಪಟ್ಟ ಸಾಮಾಜಿಕ ಸುಧಾರಕ ಮತ್ತು ಪ್ರಸಿದ್ಧ ಯುನಾನಿ ವಿದ್ವಾಂಸ ಹಕೀಮ್ ಅಜ್ಮಲ್ ಖಾನ್ ಅವರ ಜನ್ಮ ದಿನಾಚರಣೆಯ ಸ್ಮರಣಾರ್ಥ ಪ್ರತಿ ವರ್ಷ ಫೆಬ್ರವರಿ 11 ರಂದು ವಿಶ್ವ ಯುನಾನಿ ದಿನವನ್ನು ಆಚ-ರಿಸಲಾಗುತ್ತದೆ.

**02 ) ವಿಜ್ಞಾನ ಕ್ಷೇತ್ರದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನ**

ವಿಜ್ಞಾನದಲ್ಲಿ ಮಹಿಳೆಯರು ಮತ್ತು ಹುಡುಗಿಯರ ಪಾತ್ರವನ್ನು ಗುರುತಿಸಲು ಫೆಬ್ರವರಿ 11 ರಂದು ಆಚರಿಸಲಾಗುತ್ತದೆ, ಫಲಾನುಭವಿಗಳಾಗಿ ಮಾತ್ರವಲ್ಲದೆ ಬದಲಾವಣೆಯ ಏಜೆಂಟ್‌ಗಳಾಗಿಯೂ ಸಹ. ಆದ್ದರಿಂದ, ಈ ದಿನವು ಮಹಿಳೆಯರು ಮತ್ತು ಹುಡುಗಿಯರಿಗೆ ವಿಜ್ಞಾನದಲ್ಲಿ ಪೂರ್ಣ ಮತ್ತು ಸಮಾನ ಪ್ರವೇಶ ಮತ್ತು ಭಾಗವಹಿಸುವಿಕೆಯನ್ನು ಸಾಧಿಸುವುದರ ಮೇಲೆ ಕೇಂದ್ರೀಕರಿಸುತ್ತದೆ. ಅಲ್ಲದೆ, ಲಿಂಗ ಸಮಾನತೆ ಮತ್ತು ಮಹಿಳೆಯರು ಮತ್ತು ಹುಡುಗಿಯರ ಸಬಲೀಕರಣವನ್ನು ಸಾಧಿಸಲು.

**03) ವಿಶ್ವ ರೋಗಿಗಳ ದಿನ**

ಇದನ್ನು ಫೆಬ್ರವರಿ 11 ರಂದು ಆಚರಿಸಲಾಗುತ್ತದೆ. ಅನಾರೋಗ್ಯದಿಂದ ಬಳಲುತ್ತಿರುವವರಿಗಾಗಿ ಭಕ್ತರು ಪ್ರಾರ್ಥನೆ ಸಲ್ಲಿಸುವ ಒಂದು ಮಾರ್ಗವಾಗಿ ಪೋಪ್ ಜಾನ್ ಪಾಲ್ II ಅವರು ಈ ದಿನವನ್ನು ಪರಿಚಯಿಸಿದರು.

**4) ಸುರಕ್ಷಿತ ಇಂಟರ್ನೆಟ್ ದಿನ**

ಈ ವರ್ಷ ಫೆಬ್ರವರಿ 11 ರಂದು ಆಚರಿಸಲಾಗುತ್ತದೆ. ಇಂಟರ್ನೆಟ್ ಅನ್ನು ಎಲ್ಲರಿಗೂ, ಮುಖ್ಯವಾಗಿ ಮಕ್ಕಳು ಮತ್ತು ಯುವಜನರಿಗೆ ಸುರಕ್ಷಿತ ಮತ್ತು ಉತ್ತಮ ಸ್ಥಳವನ್ನಾಗಿ ಮಾಡಲು ಎಲ್ಲಾ ಪಾಲುದಾರರು ಒಟ್ಟಾಗಿ ಸೇರಬೇಕೆಂದು ಈ ದಿನ ಕರೆ ನೀಡುತ್ತದೆ.

## ಸುಭಾಷಿತ

ಒಂದು ಕಾಲು ಮುಂದೆ, ಇನ್ನೊಂದು ಕಾಲು ಹಿಂದೆ ಮುಂದಿನ ಕಾಲಿಗೆ ಗರ್ವವಿಲ್ಲ. ಹಿಂದಿನ ಕಾಲಿಗೆ ಬೇಸರವಿಲ್ಲ. ಯಾಕೆಂದರೆ ಅವುಗಳಿಗೆ ಗೊತ್ತು ಇದು ಕ್ಷಣಾರ್ಧದಲ್ಲಿ ಬದಲಾಗುವುದು ಇದೆ ಅಂತಾ. ಜೀವನವು ಹೀಗೆ ಯಾಗಾವಲೂ ಸ್ಥಿರವಾಗಿರುವುದಿಲ್ಲ.

ಸಿದ್ದೇಶ್ವರ ಸ್ವಾಮೀಜಿ

# ಅಧಿಕಾರ ಹಂಚಿಕೆ ಕುರಿತು ಗೊಂದಲವಿಲ್ಲ. ಸಿಎಂ ಮತ್ತು ನಾನು ಮಾತನಾಡಿಕೊಂಡಿದ್ದೇವೆ: ಡಿಕೆಶಿ

**ಬೆಂಗಳೂರು: ಅಧಿಕಾರ ಹಂಚಿಕೆಯ ಬಗ್ಗೆ ನಾನು ಮತ್ತು ಸಿದ್ದರಾಮಯ್ಯ ಮಾತನಾಡಿಕೊಂಡಿದ್ದೇವೆ. ಬೇರೆಯವರು ಅನಗತ್ಯವಾಗಿ ಹೇಳಿಕೆ ನೀಡಿ ಪಕ್ಷಕ್ಕೆ ಹಾನಿ ಮಾಡ ಬಾರದು ಎಂದು ಹೇಳುವ ಮೂಲಕ ಪರ-ವಿರೋಧ ಚರ್ಚೆಯಲ್ಲಿ ತೊಡಗಿದ್ದವರಿಗೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಪರಾಕಿ ನೀಡಿದ್ದಾರೆ.**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಡಾ.ಯತೀಂದ್ರ ಮುಂದಿನ ಅವಧಿಗೂ ತಮ ತಂದೆಯೇ ಮುಖ್ಯಮಂತ್ರಿಯಾಗಿ ಮುಂದುವರೆಯುತ್ತಾರೆ. ನಾಯಕತ್ವ ಬದಲಾವಣೆ ಮುಗಿದ ಅಧ್ಯಾಯ. ಹೈಕಮಾಂಡ್ ಈಗಾಗಲೇ ಸಂದೇಶ ರವಾನೆ ಮಾಡಿದೆ ಎಂದು ಹೇಳಿದ್ದರು. ಅದರ ಬೆನ್ನಲ್ಲೇ ಡಿ.ಕೆ.ಶಿವಕುಮಾರ್ ಪರವಾಗಿ ಶಾಸಕರಾದ ಶಿವಗಂಗಾ ಬಸವರಾಜ್, ಇಕ್ಬಾಲ್ ಹುಸೇನ್ ಮತ್ತಿತರರು ಬ್ಯಾಟಿಂಗ್ ಮಾಡಿದ್ದರು. ಹೈಕಮಾಂಡ್ ನಾಯಕತ್ವದ ಗೊಂದಲವನ್ನು ಬಗೆಹರಿಸಬೇಕು ಎಂದು ಪ್ರತಿಪಾದಿಸಿದ್ದರು. ಸಚಿವರಾದ ಸತೀಶ್ ಜಾರಕಿಹೊಳಿ ಮತ್ತಿತರರು ಈ ಬಗ್ಗೆ ಹೇಳಿಕೆ ನೀಡುತ್ತಲೇ ಇದ್ದರು.

ಇಂದು ದೆಹಲಿಗೆ ತೆರಳುವ ಮುನ್ನ ಪ್ರತಿಕ್ರಿಯೆ ನೀಡಿರುವ ಕೆಪಿಸಿಸಿ ಅಧ್ಯಕ್ಷರೂ ಆದ ಡಿ.ಕೆ.ಶಿವಕುಮಾರ್, ಅಧಿಕಾರ ಹಂಚಿಕೆಯ



ಬಗ್ಗೆ ನಮಲ್ಲಿ ಯಾವುದೇ ಗೊಂದಲಗಳಿಲ್ಲ. ನಾನು ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿಕೊಂಡಿದ್ದೇವೆ. ಅದೇನು ಮಾತುಕತೆಯಾಗಿದೆ ಎಂಬುದು ನನಗೆ ಗೊತ್ತಿದೆ. ಕದ್ದುಮುಚ್ಚಿ ಮಾತನಾಡಿಲ್ಲ, ನಮಿಬ್ಬರ ಚರ್ಚೆಯ ವೇಳೆ ಪಕ್ಷದ ವರಿಷ್ಠರು ಇದ್ದರು. ಅದರಂತೆ ಇಬ್ಬರೂ ನಡೆದುಕೊಳ್ಳುತ್ತೇವೆ. ಬೇರೆಯವರು ಈ ವಿಚಾರವಾಗಿ ಟೆನ್ಶನ್ ತೆಗೆದುಕೊಳ್ಳುವುದು, ಹೇಳಿಕೆ ನೀಡುವುದರಿಂದ ಪ್ರಯೋಜನವಾಗುವುದಿಲ್ಲ ಎಂದಿದ್ದಾರೆ. ಈ ಮೂಲಕ ಅಧಿಕಾರ ಹಂಚಿಕೆಯ ಸಂಬಂಧಪಟ್ಟಂತೆ ಒಪ್ಪಂದವಾಗಿದೆ ಎಂದು ಡಿ.ಕೆ.ಶಿವಕುಮಾರ್ ಪರೋಕ್ಷವಾಗಿ ಸಂದೇಶ ನೀಡಿದ್ದಾರೆ. ನನ್ನ ಪರವಾಗಲಿ ಅಥವಾ ನನ್ನ ವಿರುದ್ಧವಾಗಲಿ, ಸಚಿವರಾಗಲಿ, ಶಾಸಕರಾಗಲಿ ಹೇಳಿಕೆ ನೀಡುತ್ತಿರುವುದರಿಂದ ಪಕ್ಷಕ್ಕೆ ಹಾನಿಯಾಗುತ್ತದೆ. ಎಲ್ಲರೂ ಬಾಯಿ ಮುಚ್ಚಿಕೊಂಡು ಇರಬೇಕು ಎಂದು ಎಐಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಈ ಮೊದಲೇ ಹೇಳಿದ್ದಾರೆ, ಎಲ್ಲರೂ ಅದನ್ನು ಪಾಲಿಸಬೇಕು ಎಂದರು.

ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಅವರಿಗೆ ನೋಟೀಸ್ ನೀಡುವ ಬಗ್ಗೆ ಹೈಕಮಾಂಡ್ ನಾಯಕರನ್ನು ಕೇಳಬೇಕಿದೆ ಎಂದು ಡಿ.ಕೆ.ಶಿವಕುಮಾರ್ ಪ್ರತಿಕ್ರಿಯಿಸಿದ್ದಾರೆ. ದೆಹಲಿಯ ಪ್ರವಾಸದ ವೇಳೆ ಪಕ್ಷದ ಹೈಕಮಾಂಡ್ ನಾಯಕರನ್ನು ಭೇಟಿ ಮಾಡುತ್ತೇನೆ. ಸಂಸತ್ ಅಧಿವೇಶನ ನಡೆಯುತ್ತಿದೆ. ಯಾರೆಲ್ಲಾ ಲಭ್ಯವಿರುತ್ತಾರೋ ಅವರನ್ನು ಭೇಟಿ ಮಾಡುತ್ತೇನೆ ಎಂದು ಹೇಳಿದರು. ಇಂದು ಸಂಜೆ ನಾಲ್ಕು ಗಂಟೆಗೆ ವಿವಿಧ ರಾಜ್ಯಗಳ ಚುನಾವಣೆಗೆ ಸಂಬಂಧಪಟ್ಟಂತೆ ಎಐಸಿಸಿ ವರಿಷ್ಠರು ಸಭೆ ಕರೆದಿದ್ದಾರೆ. ನನಗೆ ಅದರಲ್ಲಿ ಭಾಗವಹಿಸಲು ಆಹ್ವಾನ ಇದೆ. ವಿವಿಧ ರಾಜ್ಯಗಳ ಚುನಾವಣೆಗೆ ದಿನಾಂಕ ಪ್ರಕಟವಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿಯೇ ನಾನು ಇತ್ತೀಚೆಗೆ ಕೇರಳಕ್ಕೆ ತೆರಳಿದ್ದೆ. ದೆಹಲಿ ಭೇಟಿಯ ಬಳಿಕ ಅಸಾಂಗ ಭೇಟಿ ಬಳಿಕ ಅಸ್ಸಾಂಗೂ ಹೋಗುತ್ತೇನೆ ಎಂದು ಸ್ಪಷ್ಟಪಡಿಸಿದರು.

ದೆಹಲಿ ಭೇಟಿ ವೇಳೆ ಶುಭ ಸುದ್ದಿ ದೊರೆಯಲಿದೆಯೇ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಪ್ರತಿದಿನವೂ ನನಗೆ ಒಳ್ಳೆಯದೇ ಆಗಿದೆ. ಪ್ರತಿದಿನವೂ ಶುಭ ಸುದ್ದಿ, ಪ್ರತಿದಿನವೂ ಉತ್ತಮ ಜೀವನ, ಉತ್ತಮ ಆರಂಭ ಹಾಗೂ

3ನೇ ಪುಟಕ್ಕೆ

# ಗಾರಿಗೆ ಜಾತ್ರೆಗೆ ನೀಲಗಲ್ ಬೃಹನ್ಮಠ ಶ್ರೀಗಳಿಂದ ಧರ್ಮ ಧ್ವಜಾರೋಹಣ

❏ ನೈಜ್ಯ ದೇಸೆ ನ್ಯೂಸ್

**ಮಾನ್ವಿ: ಭಾರತೀಯ ಸಂಸ್ಕೃತಿಯ ಅವಿಭಾಜ್ಯ ಅಂಗವಾಗಿರುವ ಜಾತ್ರೆಗಳು ಜನರಲ್ಲಿ ಸಾಮಾಜಿ-ಕ ಸಾಮರಸ್ಯ ಹಾಗೂ ಧಾರ್ಮಿಕ ಭಕ್ತಿಯನ್ನು ಬೆಳೆಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ನೀಲಗಲ್ ಬೃಹನ್ಮಠದ ಡಾ. ಪಂಚಾಕ್ಷರಿ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.**

ಮಂಗಳವಾರ ಪಟ್ಟಣದ ಕಲ್ಮಠದ ಧ್ಯಾನ ಮಂದಿರದಲ್ಲಿ ಗಾರಿಗೆ ಜಾತ್ರೆಯ ಅಂಗವಾಗಿ ಧರ್ಮ ಧ್ವಜಾರೋಹಣ ನೆರವೇರಿಸಿ ಜಾತ್ರೆಗೆ ಚಾಲನೆ ನೀಡಿ ಆಶೀರ್ವಚನ ನೀಡಿದ ಅವರು, ಜಾತ್ರೆಗಳು ಕೇವಲ ಆಚರಣೆಗಳಲ್ಲ,



ಸಮಾಜವನ್ನು ಒಗ್ಗೂಡಿಸುವ ಸಾಂಸ್ಕೃತಿಕ ಶಕ್ತಿಕೇಂದ್ರಗಳಾಗಿವೆ ಎಂದು ಅಭಿಪ್ರಾಯಪಟ್ಟರು. ಕಲ್ಮಠದ ಹಿರಿಯ ಪೂಜ್ಯರಾಗಿದ್ದ ಲಿಂ. ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳವರು ಗಾರಿಗೆ ಜಾತ್ರೆಯ ಪರಿಕಲ್ಪನೆಯ ರೂವಾರಿಗಳಾಗಿದ್ದು, ಸುಮಾರು ಹನ್ನೆರಡು ವರ್ಷಗಳ ಹಿಂದೆ ಆರಂಭಿಸಿದ ಈ ಜಾತ್ರೆ ಇಂದು ಐದು ದಿನಗಳ ವೈವಿಧ್ಯಮಯ ಕಾರ್ಯಕ್ರಮಗಳ ಮೂಲಕ ವಿಶಿಷ್ಟ ಸ್ಥಾನ ಪಡೆದುಕೊಂಡಿದೆ.

ಇಂದಿನಿಂದ ಆರಂಭವಾದ ಜಾತ್ರೆಯಲ್ಲಿ ಪ್ರಭುಲಿಂಗ ಲೀಲೆ ಪ್ರವಚನ, ಕೃಷಿಮೇಳ, ಮಹಿಳಾ ದೇಶಿ ಕ್ರೀಡಾ ಸ್ಪರ್ಧೆಗಳು, ಸಾಮೂಹಿಕ ವಿವಾಹ, ಸಾಂಸ್ಕೃತಿಕ ಸ್ಪರ್ಧೆಗಳು ಸೇರಿದಂತೆ ಹತ್ತು ಹಲವು ಕಾರ್ಯಕ್ರಮಗಳು ನಡೆಯಲಿರುವುದು ನಮಗೆಲ್ಲ ಸಂತಸ ತಂದಿದೆ ಎಂದು ಅವರು ಹೇಳಿದರು. ಮಹಾಶಿವರಾತ್ರಿ ದಿನದಂದು ಲಿಂ. ವಿರೂಪಾಕ್ಷ ಶ್ರೀಗಳ ಉತ್ಸವ ಮೂರ್ತಿಯ ಮೆರವಣಿಗೆಯೊಂದಿಗೆ ರಥೋತ್ಸವ ಭವ್ಯವಾಗಿ ಜರುಗಲಿದ್ದು, ಎಲ್ಲಾ ಕಾರ್ಯಕ್ರಮಗಳು ಯಶಸ್ವಿಯಾಗಿ ನೆರವೇರಲಿ ಎಂದು ನೀಲಗಲ್ ಶ್ರೀಗಳು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಕಲ್ಮಠದ ಪೀಠಾಧ್ಯಕ್ಷರಾದ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಧರ್ಮ ಧ್ವಜಾರೋಹಣ ಕಾರ್ಯಕ್ರಮಕ್ಕೆ ದಿವ್ಯ ಸಾನಿಧ್ಯ ವಹಿಸಿದ್ದರು. ಕಲ್ಮಠದ ಅನೇಕ ಸದ್ಭಕ್ತರು ಹಾಗೂ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತ-ರಿದ್ದರು. ಶಿಕ್ಷಕ ಶಾಂತಸ್ವಾಮಿ ಹಿರೇಮಠ ಕೋಟ್ನೆಕಲ್ ಕಾರ್ಯಕ್ರಮ ನಿರೂಪಿಸಿದರು.

# ಫೆ.15 ರಂದು ಭಾರತ-ಪಾಕ್ ಸೆಣಸಾಟ!

❏ ನೈಜ್ಯ ದೇಸೆ ನ್ಯೂಸ್

**ಬೆಂಗಳೂರು: ಭಾರತದ ವಿರುದ್ಧ ಪಂದ್ಯವನ್ನು ಬಾಯ್ಕಾಟ್ ಮಾಡುವುದಾಗಿ ಬೆದರಿಕೆಯೊಡ್ಡಿದ್ದ ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಯೂಟರ್ನ್ ಹೊಡೆದಿದೆ. ಈ ಯೂಟರ್ನ್-ನೊಂದಿಗೆ ಫೆ.15 ರಂದು ಭಾರತ ಮತ್ತು ಪಾಕಿಸ್ತಾನ್ ನಡುವಣ ಪಂದ್ಯ ನಡೆಯುವುದು ಸಹ ಖಚಿತವಾಗಿದೆ.**

ಫೆ.15 ಕ್ಕೆ ನಿಗದಿಯಾಗಿರುವ ಟಿ20 ವಿಶ್ವಕಪ್?ನ 27ನೇ ಪಂದ್ಯದಲ್ಲಿ ಭಾರತ ಮತ್ತು ಪಾಕಿಸ್ತಾನ್ ಮುಖಾಮುಖಿಯಾಗುಬುದು ಖಚಿತವಾಗಿದೆ. ಇದಕ್ಕೂ ಮುನ್ನ ಈ ಪಂದ್ಯವನ್ನು ಬಹಿಷ್ಕರಿಸುವುದಾಗಿ ಪಾಕಿಸ್ತಾನ್ ಕ್ರಿಕೆಟ್ ಮಂಡಳಿ ಹೇಳಿಕೊಂಡಿತ್ತು. ಇದೀಗ ಪಿಸಿಬಿಯ ಮನವೊಲಿಸುವಲ್ಲಿ ಐಸಿಸಿ ಯಶಸ್ವಿಯಾಗಿದ್ದು, ಅದರಂತೆ ಫೆ.15 ರಂದು ಉಭಯ ತಂಡಗಳು ಕಣಕ್ಕಿಳಿಯಲಿವೆ ಎಂದು



ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ ತಿಳಿಸಿದೆ. ಟಿ20 ವಿಶ್ವಕಪ್ ನಿಂದ ಬಾಂಗ್ಲಾದೇಶ್ ತಂಡವನ್ನು ಕೈ ಬಿಟ್ಟಿರುವುದನ್ನು ಖಂಡಿಸಲು ಪಾಕಿಸ್ತಾನ್ ಕ್ರಿಕೆಟ್ ಬೋರ್ಡ್ ಭಾರತದ ವಿರುದ್ಧದ ಪಂದ್ಯವನ್ನು ಬಹಿಷ್ಕ-ರಿಸುವುದಾಗಿ ತಿಳಿಸಿತ್ತು. ಆಟಗಾರರ ಸುರಕ್ಷತೆಯ ದೃಷ್ಟಿಯಿಂದ ಬಾಂಗ್ಲಾದೇಶ್ ತಂಡದ ಪಂದ್ಯಗಳನ್ನು ಭಾರತದಿಂದ ಶ್ರೀಲಂಕಾಗೆ ಸ್ಥಳಾಂತರ ಮಾಡಬೇಕೆಂದು ಬಾಂಗ್ಲಾದೇಶ್ ಕ್ರಿಕೆಟ್ ಬೋರ್ಡ್ ಆಗ್ರಹಿಸಿತ್ತು. ಇತ್ತ ಭಾರತ ಮತ್ತು ಪಾಕಿಸ್ತಾನ್ ನಡುವಣ ಪಂದ್ಯ ನಡೆಯದೇ ಇದ್ದರೆ ಐಸಿಸಿ ಆದಾಯಕ್ಕೆ ಆರ್ಥಿಕ ನಷ್ಟ ಉಂಟಾಗಲಿದೆ. ಹೀಗಾಗಿ ಇದೀಗ ಐಸಿಸಿ ಅಧಿಕಾರಿಗಳು ಪಾಕಿಸ್ತಾನ್ ಕ್ರಿಕೆಟ್ ಮಂಡಳಿಯ ಮನವೊಲಿಸುವ ಕಾಯಕಕ್ಕೆ ಕೈ ಹಾಕಿದ್ದರು.

# ರಾಷ್ಟ್ರೀಯ ಜಂತು ಹುಳು ನಿವಾರಣ ಆಂದೋಲನ

❏ ನೈಜ್ಯ ದೇಸೆ ನ್ಯೂಸ್

**ಲಿಂಗಸಗೂರು: ಪಟ್ಟಣದ ಶಾಸಕರ ಮಾದರಿ ಶಾಲೆಯಲ್ಲಿ ರಾಷ್ಟ್ರೀಯ ಜಂತು ಹುಳು ನಿವಾರಣ ಕಾರ್ಯಕ್ರಮದಲ್ಲಿ ಶಾಲಾ ಮಕ್ಕಳಿಗೆ ಅಲ್ಬೆಂಡಾಜೋಲ್ ಮಾತ್ರೆ ನುಂಗಿಸುವ ಮೂಲಕ ಆಂದೋಲನಕ್ಕೆ ಚಾಲನೆ ನೀಡಿ ಮಾತನಾಡಿದ ತಾಲೂಕು ಆರೋಗ್ಯ ಅಧಿಕಾರಿಗ ಡಾ: ಅಮರಶ್ ಪಾಟೀಲ ತಾಲೂಕಿನ ಎಲ್ಲ ಅಂಗನವಾಡಿ ಶಾಲೆ ಕಾಲೇಜುಗಳ ಒಟ್ಟು 1.24 ಲಕ್ಷ ಮಕ್ಕಳಿಗೆ ಇಲಾಖಾ ಮಾರ್ಗಸೂಚಿಯಂತೆ ವರ್ಷಕ್ಕೆ ಎರಡು ಬಾರಿ ಫೆಬ್ರುವರಿ ಮತ್ತು ಆಗಸ್ಟ್ ಮಾಹೆಯಲ್ಲಿ ಈ ಮಾತ್ರೆಗಳು ನೀಡಲಾಗುವುದು.**

ಇದು ಸಂಪೂರ್ಣ ಸುರಕ್ಷಿತವಾದ ಮಾತ್ರೆಯನ್ನು 2ರಿಂದ 19 ವರ್ಷದ ಎಲ್ಲ ಮಕ್ಕಳು ತಪ್ಪದೇ ಸೇವಿಸಬೇಕು. ಇದು ರಕ್ತ ಹೀನತೆ ತಡೆಗಟ್ಟಲು ಸಹಕಾರಿಯಾಗಿದೆ ಎಂದು ತಿಳಸಿದರು. ಈ ಸಂದರ್ಭದಲ್ಲಿ ಶಾಲಾ ಮುಖ್ಯೋಪಾಧ್ಯಾಯ ಸುಭಾಷ. ಶಿಕ್ಷಣ ಇಲಾಖೆಯ ಅಧಿಕಾರಿಗಳಾದ ಚಂದ್ರಶೇಖರ. ಮೌನೇಶ. ಬಸವರಾಜ. ಗುರು ಸಂಗಯ್ಯ. ಆರೋಗ್ಯ ಇಲಾಖೆಯ ಡಾ: ಸೌಮ್ಯ. ನಾಗರತ್ನ. ಸೀತಾ. ಹುಚ್ಚಪ್ಪ. ಸಿದ್ಧಾರೂಢ. ಪ್ರಾಣೇಶ್. ಶಾಲಾ ಶಿಕ್ಷಕರು. ವಿದ್ಯಾರ್ಥಿಗಳು ಹಾಗೂ ಆಶಾ ಕಾರ್ಯಕರ್ತರು ಹಾಜರಿದ್ದರು.



# ಕೆನಡಾದಿಂದ ಚಂದನ್ ಕುಮಾರ್ ಮೃತದೇಹ ತರಲು ಎಚ್‌ಡಿಕೆ ಸಹಕಾರ, ಪೋಷಕರಿಗೆ ಪರಮೇಶ್ವರ್ ಸಾಂತ್ವನ

❏ ನೈಜ್ಯ ದೇಸೆ ನ್ಯೂಸ್

**ಬೆಂಗಳೂರು: ಕೆನಡಾದಲ್ಲಿ ಕೊಲೆಯಾದ ಚಂದನ್ ಕುಮಾರ್ ಅವರ ತಂದೆ ತಾಯಿಗಳಿಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಸಾಂತ್ವನ ಹೇಳಿದ್ದು, ಪಾರ್ಥಿವ ಶರೀರವನ್ನು ಶೀಘ್ರವೇ ಭಾರತಕ್ಕೆ ತರಲು ಪ್ರಯತ್ನಿಸುತ್ತಿರುವುದಾಗಿ ಭರವಸೆ ನೀಡಿದ್ದಾರೆ. ರಾಜ್ಯ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದು ತ್ಯಾಮಗೊಂಡ್ಲುಗೆ ಭೇಟಿ ನೀಡಿ, ತಂದೆ ತಾಯಿಯನ್ನು ಭೇಟಿ ಮಾಡಿ ಸಾಂತ್ವನ ಹೇಳಿದ್ದಾರೆ.**

ನೆಲಮಂಗಲ ಕ್ಷೇತ್ರದ ಶಾಸಕ ಡಾ.ಶ್ರೀನಿವಾಸ ಮೂರ್ತಿ ಇಂದು ಚಂದನ್ ಕುಮಾರ್ ಮನೆಗೆ ಭೇಟಿ ನೀಡಿದ್ದರು. ಅಲ್ಲಿಂದಲೇ ಕೇಂದ್ರ ಸಚಿವ ಕುಮಾರಸ್ವಾಮಿ ಅವರಿಗೆ ದೂರವಾಣಿ ಕರೆ ಮಾಡಿದ್ದರು. ಆ ವೇಳೆ ಚಂದನ್ ಅವರ ತಂದೆ ತಾಯಿ ಜೊತೆ ಮಾತನಾಡಿದ ಕುಮಾರಸ್ವಾಮಿಯವರು ಭಾರೀ ಅನ್ಯಾಯವಾಗಿ ಹೋಗಿದೆ ಎಂದು ವಿಷಾದಿಸಿದ್ದಾರೆ.



ತಾವು ರಾಯಭಾರ ಕಚೇರಿಯೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿದ್ದು, ಪಾರ್ಥಿವ ಶರೀರವನ್ನು ಆದಷ್ಟು ಶೀಘ್ರವಾಗಿ ತರಲು ಯತ್ನಿಸುವುದಾಗಿ ಭರವಸೆ ನೀಡಿದ್ದಾರೆ.ಚಂದನ್ ಅವರ ತಂದೆ, ತಮ ಪುತ್ರನನ್ನು ತಾಯ್ನಾಡಿನಲ್ಲೇ ಸಂಸ್ಕಾರ ಮಾಡಬೇಕು. ಮೃತದೇಹ ತರಲು ಸಹಾಯ ಮಾಡಿ ಎಂದು ಮನವಿ ಮಾಡಿದ್ದಾರೆ. ನನ್ನ ಮಗನಿಗೆ ಕೆನಡಾಗೆ ಹೋಗುವುದು ಬೇಡ. ಇಲ್ಲೇ ಇರು ಎಂದು ಒತ್ತಾಯ ಮಾಡಿದ್ದೆ. ಮದುವೆಯಾಗುವಂತೆಯೂ ಹೇಳಿದ್ದೆ. ವಿದೇಶಕ್ಕೆ ಹೋಗುವ ಅವಕಾಶ ಸಿಕ್ಕಾಗ ಬಿಡಬಾರದು ಎಂದು ಹೇಳಿ ನನ್ನನ್ನೇ ಸಮಾಧಾನ ಮಾಡಿದ್ದ ಎಂದು ತಂದೆ ಕಣ್ಣೀರು ಹಾಕಿದ್ದಾರೆ.

ಗೃಹ ಸಚಿವ ಪರಮೇಶ್ವರ್ ಭೇಟಿಯ ವೇಳೆ ತಾಯಿ ಶೈಲಜಾ, ತಮ ಪುತ್ರನ ಪ್ರತಿಭೆಯ ಬಗ್ಗೆ ಗುಣಗಾನ ಮಾಡಿ ದುಃಖ ತೋಡಿಕೊಂಡಿದ್ದಾರೆ. ಅರೆಕಾಲಿಕ ಉದ್ಯೋಗ ಮಾಡಿಕೊಂಡು ಎಂಜಿನಿಯರಿಂಗ್ ಓದಿದ್ದ ಚಂದನ್, ಕ್ರೀಡೆ, ಓದು ಎಲ್ಲದರಲ್ಲೂ ಮುಂದಿದ್ದ. ಸ್ವಂತ ಪ್ರತಿಭೆಯ ಮೇಲೆ ಕೆನಡಾದಲ್ಲಿ ಉದ್ಯೋಗ ಗಿಟ್ಟಿಸಿದ್ದಷ್ಟೂ. ನಮಗೆ ಯಾವ ಸಂದರ್ಭದಲ್ಲಿಯೂ ಒಂದಿಷ್ಟೂ ಕಷ್ಟ ಕೊಟ್ಟಿರಲಿಲ್ಲ ಎಂದು ಹೇಳಿಕೊಂಡಿದ್ದಾರೆ. ನಾವು ಆತನ ಮೇಲೆ ಜೀವವನ್ನೇ ಇಟ್ಟುಕೊಂಡಿದ್ದೇವು. ಅವನಿಲ್ಲದ ಜೀವನ ನಮಗೆ ಕಲ್ಪಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ. ನಾವು ಇನ್ನೇಕೆ ಜೀವದಿಂದ ಇರಬೇಕು ಎಂಬ ನಿರಾಶೆ ಕಾಡುತ್ತಿದೆ ಎಂದಿದ್ದಾರೆ.

ತಮ ಪುತ್ರನ ಪ್ರತಿಭೆ ಹಾಗೂ ಒಳ್ಳೆಯತನದ ಬಗ್ಗೆ ಹೊಗಳುವುದು ಇಷ್ಟವಾಗುತ್ತಿರಲಿಲ್ಲ. ನಾನು ಹೆಮೆಯಿಂದ ಯಾರ ಬಳಿಯಾದರೂ ಹೇಳಿಕೊಂಡರೆ, ಆ ರೀತಿ ಹೇಳಬೇಡ ಎಂದು ನನ್ನನ್ನೇ ಬಯ್ಯುತ್ತಿದ್ದ. ವಿದೇಶದಲ್ಲಿರುವ ಉದ್ಯೋಗಾವಕಾಶಗಳ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿ ಹೇಳುವ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿದ್ದ. ಕೆನಾಡಾಗೆ ಯಾರೇ ಬರುವುದಿದ್ದರೂ ಸಹಾಯ ಮಾಡುತ್ತೇನೆ ಎಂದು ಭರವಸೆ ನೀಡಿದ್ದ ಎಂದು ಗೃಹ ಸಚಿವರಿಗೆ ವಿವರಿಸಿದ್ದಾರೆ. ಕೆನಡಾದಲ್ಲಿ ಕನ್ನಡಾಭಿಮಾನ ಬಿತ್ತುವಲ್ಲಿ ಚಂದನ್ ಪಾತ್ರ ಪ್ರಮುಖವಾಗಿತ್ತು. ಕನ್ನಡ ಚಿತ್ರಗಳನ್ನು ಅಲ್ಲಿ ಬಿಡುಗಡೆ ಮಾಡಿಸಲು ಯತ್ನಿಸುತ್ತಿದ್ದರು ಎಂದು ಅವರ ಸ್ನೇಹಿತರು ಹೇಳಿದ್ದಾರೆ.ಸಚಿವ ಪರಮೇಶ್ವರ್, ಇದು ಆಗಬಾರದಿತ್ತು. ಧೈರ್ಯ ತಂದುಕೊಳ್ಳಿ. ನಾವು ನಿಮ ಜೊತೆಗಿದ್ದೇವೆ ಎಂದು ಪೋಷಕರಿಗೆ ಧೈರ್ಯ ಹೇಳಿದ್ದಾರೆ.

## ಸಾಹಿತ್ಯ ಸಿಂಚನ

ಛಿದ್ರ ದರ್ಪಣ..!

ನೀನಾಗಿ ನೀನೆಯೇ ಎಲ್ಲವನೂ
ತೊಳೆದುಕೊಂಡು ಹೋದ ಮೇಲೆ
ಕಳೆದುಕೊಳ್ಳಲು ಇನ್ನೇನಿದೆ ಗೆಳೆಯ.?

ನೀನಾಗಿ ನೀನೆಯೇ ಸಕಲವನೂ
ಗುಡಿಸಿಕೊಂಡು ಹೋದ ಮೇಲೆ
ಗಳಿಸಿಕೊಳ್ಳಲು ಮತ್ತೇನಿದೆ ಇನಿಯ.?

ನೀನಾಗಿ ನೀನೆಯೇ ಸಮಸ್ತವನು
ಜಾಡಿಸಿಕೊಂಡು ಹೋದ ಮೇಲೆ
ಜೋಡಿಸಿಕೊಳ್ಳಲು ಇನ್ನೇನಿದೆ ಪ್ರಿಯಾ.?

ನೀನಾಗಿ ನೀನೆಯೇ ಸರ್ವವನು
ಬಿಡಿಸಿಕೊಂಡು ಹೋದ ಮೇಲೆ
ಬೆಸೆದುಕೊಳ್ಳಲು ಮತ್ತೇನಿದೆ ಒಡೆಯಾ.?

ನೀನಾಗಿ ನೀನೆಯೇ ಸರ್ವಸ್ವವನು
ಕಡಿದುಕೊಂಡು ಹೋದ ಮೇಲೆ
ಕೂಡಿಸಿಕೊಳ್ಳಲು ಇನ್ನೇನಿದೆ ಮಾರಾಯ.!

ಮರೆತವರನ್ನು ಮುನಿದವರನ್ನು
ಮೋಸಮಾಡಿದವರನ್ನು ಮನ್ನಿಸಬಹುದು
ಮಣ್ಣಾಗಿಸಿದವರನ್ನು ಮನ್ನಿಸಲಾದೀತೆ.?

ಸಿಟ್ಟಾದವರನ್ನು ಸಿಡುಕುವವರನ್ನು
ಸತಾಯಿಸಿದವರನ್ನು ಸಹಿಸಬಹುದು
ಸದಾ ಸಾಯಿಸುವವರನ್ನು ಸಹಿಸಲಾದೀತೆ.?

ನಿಂದಿಸಿದವರನ್ನು ನರಳಿಸಿದವರನ್ನು
ನೋಯಿಸಿದವರನ್ನು ಕ್ಷಮಿಸಬಹುದು
ನಿತ್ಯ ನಂಜಿಡುವವರನ್ನು ಕ್ಷಮಿಸಲಾದೀತೆ.!

ತೀರಿದ ಸಂತೆಯ ಗತನೆನಪ ಚಿಂತೆಯೇಕೆ
ಮರಳಿ ಬಾರದು ಕೈಜಾರಿ ಹೋದ ಕಾಲ
ಬದಲಾಗಲೇಬೇಕು ಭಾವ ಬದುಕು ಸಕಲ.!

ನಶ್ವರಗಳ ಬಾಳಲ್ಲಿ ಶಾಶ್ವತ ಮೋಹವೇಕೆ.?
ಮುಗಿಯಲೇಬೇಕು ಎಲ್ಲವು ಒಂದು ದಿನ
ತೊರೆಯಲೇಬೇಕು ಎಲ್ಲ ಬಂಧ ಬಂಧನ.!

ಎ.ಎನ್.ರಮೇಶ್.ಗುಬ್ಬಿ

## ಜಂತುಹುಳು ರಹಿತ ಮಕ್ಕಳು ಆರೋಗ್ಯವಂತ ಮಕ್ಕಳು :ಡಾಕ್ಟರ ಉಮ್ಮೆ ಅಮೇರಾ ವೈದ್ಯಾಧಿಕಾರಿಗಳು

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಫೆಬ್ರವರಿ 10: ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ಸರಕಾರಿ ಪಬ್ಲಿಕ್ ಶಾಲೆ. ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಜಂತುಹುಳು ನಿವಾರಣಾ ದಿನದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮವನ್ನು ಮುಖ್ಯೋಪಾಧ್ಯಾಯರು ಜಿ.ಎಸ್. ಪಾಟೀಲ ಸಸಿಗೆ ನೀರು ಹಾಕುವ ಮೂಲಕ ಉದ್ಘಾಟನೆ ಮಾಡಿದರು ನಂತರ ಮಾತನಾಡಿದವರು ಮಕ್ಕಳು ತಮ್ಮ ಆರೋಗ್ಯಕ್ಕಾಗಿ



ತಪ್ಪದೇ ಅಲ್ಬಂಡೊ ಜೋಲ್ ಮಾತ್ರೆಯನ್ನು ಸೇವನೆ ಮಾಡಬೇಕು ಮಕ್ಕಳು ಉತ್ತಮ ಪೌಷ್ಟಿಕ ಆಹಾರ ಸೇವನೆ ಮಾಡುವ ಮೂಲಕ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದರು. ನಂತರ ಮಾತನಾಡಿದ ಡಾಕ್ಟರ ಉಮ್ಮೆ ಅಮೇರಾ ವೈದ್ಯಾಧಿಕಾರಿಗಳು ಮಕ್ಕಳಲ್ಲಿ ರಕ್ತಹೀನತೆ ತಡೆಗಟ್ಟಲು ಆರು ತಿಂಗಳಿಗೊಮ್ಮೆ ಅಲ್ಬಂಬೋಡ ಜೋಲ್ ಮಾತ್ರೆಯನ್ನು ತಪ್ಪದೇ ಸೇವನೆ ಮಾಡಬೇಕು, ಮಕ್ಕಳು ದೈಹಿಕ ಆರೋಗ್ಯದ ಬೆಳವಣಿಗೆ ಕುಂಠಿತವಾಗುವುದು ತಡೆಗಟ್ಟಲು ಮಾತ್ರೆಯನ್ನು ತೆಗೆದುಕೊಳ್ಳದದು ಅವಶ್ಯಕವಾಗಿದೆ, ಮಕ್ಕಳು ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಪೌಷ್ಟಿಕ ಆಹಾರ ಸೇವನೆ ಬಹಳ ಮುಖ್ಯವಾದದ್ದು ಎಂದರು. ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ. ಪ್ರಾಥ-ಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳು ರಾಧಾ ಕೊಂಡಿ ಆರೋಗ್ಯ ನಿರೀಕ್ಷಣಾ ಅಧಿಕಾ-ರಿಗಳು ಅಂಬಮ್ಮ ಆಶಾ ಕಾರ್ಯಕರ್ತೆಯರು ಹಂಪಮ್ಮ.ಶರಣಮ್ಮ. ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

## ಮಾನ್ವಿಯಲ್ಲಿ ಭೀಕರ ಅಪಘಾತ ಕಾಂಕ್ರೀಟ್ ಮಿಕ್ಸರ್ ಲಾರಿಯಡಿಯಲ್ಲಿ ದ್ವಿಚಕ್ರ ಸವಾರ ದಾರುಣ ಅಂತ್ಯ





ನೈಜ್ಯ ದೆಸೆ ನ್ಯೂಸ್

ಮಾನ್ವಿ: ಪಟ್ಟಣದ ಕರ್ನಾಟಕ ಬ್ಯಾಂಕ್ ಹತ್ತಿರದ ಹೆದ್ದಾರಿಯಲ್ಲಿ ಮಂಗಳವಾರ ಮಧ್ಯಾಹ್ನ ಸುಮಾರು 12 ಗಂಟೆ ವೇಳೆಗೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ದ್ವಿಚಕ್ರ ವಾಹನ ಸವಾರ ಚೆನ್ನಪ್ಪ ಮೇಟಿಗೌಡ ಮಾಡಗಿರಿ ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ನಡೆದಿದೆ.

ಕಾಂಕ್ರೀಟ್ ಮಿಕ್ಸರ್ ಲಾರಿಯಡಿಯಲ್ಲಿ ಸಿಲುಕಿದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ ಎಂದು ತಿಳಿದು ಬಂದಿದೆ. ಚೆನ್ನಪ್ಪ ಮೇಟಿಗೌಡ ಮಾಡಗಿರಿ ಅವರು ದ್ವಿಚಕ್ರ ವಾಹನದಲ್ಲಿ ಸಾಗುತ್ತಿದ್ದ ವೇಳೆ ಲಾರಿಯೊಂದಿಗೆ ಡಿಕ್ಕಿ ಹೊಡೆದು ಕೆಳಗೆ ಬಿದ್ದಿದ್ದು, ಲಾರಿಯ ಚಕ್ರಗಳಡಿ ಸಿಲುಕಿದ ಕಾರಣ ಗಂಭೀರ ಗಾಯಗಳಿಂದ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ಪ್ರಾಥಮಿಕ ಮಾಹಿತಿ ತಿಳಿಸಿದೆ. ಈ ಅಪಘಾತದಲ್ಲಿ ಮತ್ತೋರ್ವರಿಗೆ ಗಾಯಗಳಾಗಿವೆ. ಘಟನೆಯ ಸುದ್ದಿ ತಿಳಿದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಅಪಘಾತದಿಂದಾಗಿ ಕೆಲಕಾಲ ಹೆದ್ದಾ-ರಿಯಲ್ಲಿ ಸಂಚಾರ ದಟ್ಟಣೆ ಉಂಟಾಗಿತ್ತು.

# ಕಾಯಕ ಶರಣರ ಜಯಂತೋತ್ಸವ ಆಚರಣೆ

ನೈಜ್ಯ ದೆಸೆ ನ್ಯೂಸ್

ತಾಳಿಕೋಟಿ: ಪಟ್ಟಣದ ಸರ್ವಜ್ಞ ವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥ-ಮಿಕ ಹಾಗೂ ಪ್ರೌಢಶಾಲೆಯಲ್ಲಿ ಮಂಗಳವಾರ ಕಾಯಕ ಶರಣರಾದ ಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಡೋಹರ್ ಕಕ್ಕಯ್ಯ, ಉರಿಲಿಂಗ ಪೆದ್ದಿ, ಸಮಗಾರ ಹರಳಯ್ಯ ಜಯಂತೋತ್ಸವವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಸಂಸ್ಥಾಪಕ ಅಧ್ಯಕ್ಷರಾದ ಸಿದ್ದನಗೌಡ ಮಂಗಳೂರ ಮಾತನಾಡಿ ಕ್ರಾಂತಿಯೋಗಿ ಬಸವಣ್ಣನವರ ಸಮ ಸಮಾಜದ ನಿರ್ಮಾಣದ ಆಂದೋಲನದಲ್ಲಿ ಎಲ್ಲ ಶರಣರು ಅಮೂಲ್ಯವಾದ ಕೊಡುಗೆಯನ್ನು




ನೀಡಿದ್ದಾರೆ ಅವರೆಲ್ಲರ ಆದರ್ಶ ಬದುಕು ನಮಗೆ ಮಾದರಿ ಯೋಗ್ಯವಾಗಿದೆ ಎಂದರು. ಈ ಸಮಯದಲ್ಲಿ ಮುಖ್ಯಗುರುಗಳಾದ ಸಂತೋಷ ಪವಾರ, ಜವಳಗೇರಿ, ದೈಹಿಕ ಶಿಕ್ಷಕರಾದ ಬಸವರಾಜ ಚಳಗಿ,ಶಾಂತಗೌಡ ಬಿರಾದಾರ, ಸಂಜು ಕುಮಾರ ರಾಠೋಡ, ಬಸವರಾಜ ಸವದತ್ತಿ, ರವಿಕುಮಾರ , ರವಿಕುಮಾರ ಮಲಾಬಾದಿ, ರಸೂಲಸಾ ತುರ್ಕಣಗೇರಿ, ಸಿದ್ದನಗೌಡ ಮುದ್ನೂರ, ಭೀಮನಗೌಡ ಸಾಸನೂರ, ಚೇತನ ನಾವದಗಿ, ಸವಿತಾ ಅಸ್ಕಿ,ಶಿವಲೀಲಾ ಚುಂಚೂರು, ರೂಪ ಪಾಟೀಲ, ಸಂಗಮೇಶ ಬಿರಾದಾರ, ಸಂಗೀತ ಬಿರಾದಾರ, ಮೇಘಾ ಪಾಟೀಲ, ಬೋರಮ್ಮ ಉಕ್ಕಲಿ, ಅನಿತಾ ಚೌದ್ರಿ, ಜ್ಯೋತಿ ಪೊಲಿಸ್ ಪಾಟೀಲ, ಶೃತಿ ಚೌದ್ರಿ,ರಾಜಬಿ ಬಿದರಿ, ನಾಗರತ್ನ ಮೈಲೇಶ್ವರ,ಶಿವಕುಮಾರ ಕುಂಬಾರ, ಹೀನಾ ಸನದಿ, ದೇವೇಂದ್ರ ಗುಳೆದ, ಮುಬಾರಕ ಬನ್ನಟ್ಟಿ,ದೇವರಾಜ ದೇಸಾಯಿ, ಸುಮಾ ಹಿರೇಮಠ, ಪ್ರತಿಭಾ ಗುಬ್ಬೇವಾಡ, ಗುರುದೇವಿ ಮಡಿವಾಳರ, ಜೈಯಶ್ರೀ ಹದಿಮೂರ, ಜೈರಾಬಿ ಮುಲ್ಲಾ ಸರ್ವ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸರ್ವಜ್ಞ ಜಯಂತಿ ಕುರಿತು ಇಂದು ಪೂರ್ವಭಾವಿ ಸಭೆ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಫೆಬ್ರವರಿ 10 (ಕರ್ನಾಟಕ ವಾರ್ತೆ): ಜಿಲ್ಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಫೆಬ್ರವರಿ 20ರಂದು ಸಂತಕವಿ ಸರ್ವಜ್ಞ ಜಯಂತಿ ಜಯಂತಿ ನಡೆಯಲಿವೆ. ಈ ಜಯಂತಿಗಳ ಅಂಗವಾಗಿ ಫೆ.11ರ ಬೆಳಿಗ್ಗೆ 11 ಗಂಟೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ




ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದ್ದು, ಸಮಾಜದ ಮುಖಂಡರು, ಸಂಬಂಧಿಸಿದ ಇಲಾಖೆಯ ಅಧಿಕಾ-ರಿಗಳು ಸಭೆಯಲ್ಲಿ ಭಾಗವಹಿಸಿ ಸೂಕ್ತ ಸಲಹೆ ಸೂಚನೆ ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

## ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಮುಷ್ಟೂರು ಇವರ ವತಿಯಿಂದ ಶಾಲಾ ವಾರ್ಷಿಕೋತ್ಸವ ಹಾಗೂ ಬೀಳ್ಕೊಡುಗೆ ಸಮಾರಂಭ



ನೈಜ್ಯ ದೆಸೆ ನ್ಯೂಸ್

ಮಾನವಿ: ಸರ್ಕಾರಿ ಹಿರಿಯ ಪ್ರಾಥ-ಮಿಕ ಶಾಲೆ, ಮುಷ್ಟೂರು ಇವರ ವತಿಯಿಂದ ಶಾಲಾ ವಾರ್ಷಿಕೋತ್ಸವ ಹಾಗೂ ಬೀಳ್ಕೊಡುಗೆ ಸಮಾರಂಭ ಅದ್ದೂರಿಯಾಗಿ ಜರುಗಿತು ಕಾರ್ಯಕ್ರಮದ ಆರಂಭದಲ್ಲಿ ದೀಪ ಬೆಳಗಿಸುವ ಮೂಲಕ ಸಮಾರಂಭಕ್ಕೆ ಚಾಲನೆ ನೀಡಲಾಯಿತು.

ಈ ಸಮಾರಂಭದಲ್ಲಿ ತಹಶಿಲ್ದಾರರಾದ ಭೀಮರಾಯ ರಾಮಸಮುದ್ರ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿ, ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಗಳು ಸಮಾಜ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ತಿಳಿಸಿದರು. ಶಿಕ್ಷಕರ ಸಮರ್ಪಿತ ಸೇವೆಯಿಂದಲೇ ವಿದ್ಯಾರ್ಥಿಗಳು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು. ವಿದ್ಯಾರ್ಥಿಗಳು ಶಿಸ್ತು, ಶ್ರಮ ಮತ್ತು ಆತ್ಮವಿಶ್ವಾಸದಿಂದ ಮುಂದೆ ಸಾಗಬೇಕು ಎಂದು ಪ್ರೇರಣಾದಾಯಕ ಸಂದೇಶ ನೀಡಿದರು. ನಂತರ ಶಾಲಾ ವಿದ್ಯಾರ್ಥಿಗಳಿಂದ ಪ್ರಾರ್ಥನೆ, ಸ್ವಾಗತ ಗೀತೆ, ನೃತ್ಯ, ನಾಟಕ, ಭಾಷಣ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಿತು. ವಿದ್ಯಾರ್ಥಿಗಳ ಕಲಾತ್ಮಕ ಪ್ರತಿಭೆ ಎಲ್ಲರ ಮನಸೆಳೆದಿತು. ಬೀಳ್ಕೊಡುಗೆ ಸಮಾರಂಭದ ಅಂಗವಾಗಿ ಶಾಲೆಯಿಂದ ಹೊರಹೋಗುವ ಹಿರಿಯ ವಿದ್ಯಾರ್ಥಿಗಳಿಗೆ ಸ್ಮರಣಿಕೆ ಹಾಗೂ ಪ್ರಮಾಣಪತ್ರಗಳನ್ನು ವಿತರಿಸಲಾಯಿತು. ಅವರ ಮುಂದಿನ ಶಿಕ್ಷಣ ಜೀವನದಲ್ಲಿ ಯಶಸ್ಸು ದೊರಕಲೆಂದು ಗಣ್ಯರು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಶಾಲಾ ಮುಖ್ಯೋಪಾಧ್ಯಾಯರು ಶಾಲೆಯ ವಾರ್ಷಿಕ ವರದಿಯನ್ನು ವಾಚಿಸಿ, ಕಳೆದ ವರ್ಷದ ಶೈಕ್ಷಣಿಕ ಸಾಧನೆ, ಕ್ರೀಡಾ ಚಟುವಟಿಕೆಗಳು ಹಾಗೂ ವಿವಿಧ ಸ್ಪರ್ಧೆಗಳಲ್ಲಿನ ಯಶಸ್ಸಿನ ಕುರಿತು ವಿವರಿಸಿದರು. ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಕರು, ಎಸ್‌ಡಿ-ಎಂಸಿ ಸದಸ್ಯರು, ಪಾಲಕರು, ಗ್ರಾಮ ಪಂಚಾಯತ್ ಸದಸ್ಯರು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಜಂತುಹುಳು ದೇಹಕ್ಕೆ ಪ್ರವೇಶವಾಗದಂತೆ ಎಚ್ಚರಿಕೆ ವಹಿಸಿ: ಜಿ.ಪಂ ಸಿಇಓ ಈಶ್ವರ ಕುಮಾರ ಕಾಂದೂ

ನೈಜ್ಯ ದೆಸೆ ನ್ಯೂಸ್

ರಾಯಚೂರು: ಜಂತುಹುಳು ಬಾಧೆಯಿಂದ ರಕ್ತಹೀನತೆ, ಅಪೌಷ್ಟಿಕತೆ ಉಂಟಾಗಿ ದೈಹಿಕ ಬೆಳವಣಿಗೆ ಕುಂಠಿತವಾಗಿರುವುದರಿಂದ ಜಂತುಹುಳು ದೇಹಕ್ಕೆ ಪ್ರವೇಶವಾಗದಂತೆ ಎಚ್ಚರಿಕೆ ವಹಿಸುವುದು ಅಗತ್ಯ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಹೇಳಿದರು.

ಫೆ.10ರ ಮಂಗಳವಾರ ದಂದು ನಗರದ ಕೆ.ಇ.ಬಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ, ರಾಜಮಾನಗಡ್ಡಾ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದೊಂದಿಗೆ ನಡೆದ ರಾಷ್ಟ್ರೀಯ ಜಂತುಹುಳು ನಿವಾರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ರತಿಯೊಬ್ಬರೂ ಆರೋಗ್ಯಯುತವಾಗಿದ್ದಲ್ಲಿ ಸದೃಢ ಸಮಾಜ ಕಾಣಲು ಸಾಧ್ಯ. ಆ ನಿಟ್ಟಿನಲ್ಲಿ ಶುಚಿತ್ವಕ್ಕೆ





ಹೆಚ್ಚಿನ ಒತ್ತು ನೀಡಬೇಕಿದೆ. ಜಂತುಹುಳು ದೇಹಕ್ಕೆ ಪ್ರವೇಶಿಸುವುದರಿಂದ ಅನೇಕ ರೋಗಗಳಿಗೆ ತುತ್ತಾಗಬೇಕಾಗುತ್ತದೆ. ಆದ್ದರಿಂದ ಈ ಬಗ್ಗೆ ಎಚ್ಚರಿಕೆ ವಹಿಸಬೇಕಿದೆ. ಈ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ನಾನಾ ಇಲಾಖೆಗಳು ಕೈಜೋಡಿಸಬೇಕೆಂದರು.

ರಕ್ತಹೀನತೆ ನಿಯಂತ್ರಣಕ್ಕಾಗಿ ಜಂತುಹುಳುಗಳ ನಿವಾರಣೆಗಾಗಿ ಆಲ್ಬೆಂಡೋಜೋಲ್ ಮಾತ್ರೆಗಳನ್ನು ಶಾಲಾ ಮಕ್ಕಳು, ಅಂಗನವಾಡಿ ಮಕ್ಕಳು ಸೇರಿದಂತೆ ಎಲ್ಲ ಮಕ್ಕಳಿಗೂ ತಪ್ಪದೆ ಚೆಪಿಸುವ ದಿಶೆಯಲ್ಲಿ ನಿಗಾವಹಿಸಬೇಕು ಎಂದರು. ಜಿಲ್ಲೆಯಾದ್ಯಂತ ಐದು ತಾಲೂಕಿನ 2,737 ಅಂಗನವಾಡಿ ಕೇಂದ್ರಗಳು, 2,448 ಶಾಲೆಗಳಲ್ಲಿ, ಕಾಲೇಜು, ತಾಂತ್ರಿಕ ವಿದ್ಯಾಲಯ ಸೇರಿದಂತೆ 1 ವರ್ಷದಿಂದ 19 ವರ್ಷದೊಳಗಿನ 7,33,702 ಮಕ್ಕಳಿಗೆ ಮಾತ್ರೆಗಳನ್ನು ಊಟ ಅಥವಾ ಉಪಹಾರ ಸೇವಿಸಿದ ನಂತರ ತಪ್ಪದೆ ಸೇವಿಸಲು ಆರೋಗ್ಯ ಇಲಾಖೆ ಹಾಗೂ ಮುಂಚೂಣಿ ಇಲಾಖೆಗಳಿಂದ ಜಾಗೃತಿಯನ್ನು ಮೂಡಿಸಲಾಗುತ್ತಿದ್ದು, ಮಾತ್ರೆಗಳನ್ನು ಪ್ರತಿ ಮಗುವು ಚೆಪಿಸಿ ನುಂಗಿಸಲು ಕ್ರಮವಹಿಸಿ ಮಕ್ಕಳಲ್ಲಿಯ ಜಂತುಹುಳು ನಿವಾರಣೆ ಮಾಡುವ ಮೂಲಕ ಜಿಲ್ಲೆಯ ಮಕ್ಕಳು ಆರೋಗ್ಯವಂತರಾಗಲು ಎಲ್ಲರೂ ಶ್ರಮಿಸಬೇಕು. ಅಲ್ಲದೆ ಸಮುದಾಯದಲ್ಲಿ ಜಂತಹುಳು ತಡೆಗೆ ಶೌಚಕ್ಕಾಗಿ ಶೌಚಾಲಯಗಳ ಬಳಕೆ, ಊಟದ ಮೊದಲು ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ ತೊಳೆಯುಲು, ನಡೆಯುವಾಗ ಪಾದರಕ್ಷೆ ಬಳಕೆ, ಶುದ್ಧ ನೀರು ಸೇವನೆ, ಹಣ್ಣು ತರಕಾರಿ ಸ್ವಚ್ಛವಾಗಿ ತೊಳೆದು ಬಳಸುವುದು ಪೌಷ್ಟಿಕ ಆಹಾರ ಸೇವಿಸುವುದು ಜಂತುಹುಳು ತಡೆಗೆ ಸಹಕಾರಿಯಾಗಿವೆ ಎಂಬುದನ್ನು ವ್ಯಾಪಕ ಪ್ರಚಾರ ಕೈಗೊಳ್ಳಲು ಸೂಚಿಸಿದರು.

ಇದಕ್ಕೂ ಮುಂಚೆ ಪ್ರಸ್ತಾವಿಕವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಅವರು ಮಾತನಾಡಿ, ಜಿಲ್ಲೆಯ ಎಲ್ಲ ವೈದ್ಯಾಧಿಕಾರಿಗಳ ನಿಗಾವಣೆಯಲ್ಲಿ ಆರೋಗ್ಯ ಸಿಬ್ಬಂದಿಯವರು ಮಾತ್ರೆ ಚೆಪಿಸಿ ನುಂಗಿಸುವ ಕಾರ್ಯ ನಿರ್ವಹಿಸುತ್ತಿದ್ದು, ಗೈರುಹಾಜರಿ ಅಥ-ವಾ ಅನಾರೋಗ್ಯದ ಕಾರಣದಿಂದಾಗಿ ಇಂದು ಯಾವುದಾದರೂ ಮಗು ಮಾತ್ರೆಯನ್ನು ತೆಗೆದುಕೊಳ್ಳು ಸಾಧ್ಯವಾಗದಿದ್ದಲ್ಲಿ ಅಂತ ಮಕ್ಕಳಿಗೆ ಫೆಬ್ರವರಿ 16 ರಂದು ಮಾಪ್ ಅಫ್ ದಿನದಂದು ಮಾತ್ರೆಗಳನ್ನು ಚೆಪಿಸಲಾಗುವುದು ಎಂದರು.

ಇದೇ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೆ.ಡಿ ಬಡಿಗೇರ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಂ.ಎನ್., ಜಿಲ್ಲಾ ಬಿಸಿ ಊಟದ ಅಧಿಕಾರಿ ಪ್ರಭು, ತಾಲೂಕಾರೋಗ್ಯಾಧಿಕಾರಿ ಡಾ.ಅಮೃತ್ ಹುಕ್ಕೇರಿ, ಪ್ರಭಾರಿ ಕ್ಷೇತ್ರ ಶಿಕ್ಷಣಾಧಿಕಾರಿ ಯುನಸ್ ಬಾಬು, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಅಮರೆಗೌಡ, ವೈದ್ಯಾಧಿಕಾರಿಗಳಾದ ಡಾ.ಅಶ್ವಾಕ್ ಹುಸೇನ್, ಡಾ.ಬುದ್ದಾನಂದ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ್ ದಾಸಪ್ಪನವರ, ಡಿವೈಡಿಹೆಚ್‌ಇಓ ಬಸಯ್ಯ, ಮುಖ್ಯೋಪಾದ್ಯಾಯರಾದ ರಾಜಶೇಖರ್ ಪಾಟೀಲ್, ಡಿಪಿಎಮ್ ನವೀನ್ ಕುಮಾರ, ಆರ್‌ಕೆಎಸ್‌ಕೆ ಸಂಯೋಜಕರಾದ ಜ್ಯೋತಿ ಆಲೂರು, ಕಚೇರಿ ಅಧೀಕ್ಷಕ ವೆಂಕಟೇಶ್, ಹಿರಿಯ ಹೆಚ್‌ಐಓ ಸುರೇಶ್, ಬಿಹೆಚ್‌ಇಓ ಸರೋಜಾ ಕೆ, ಎಫ್‌ಡಿಎ ರಾಘವೇಂದ್ರ, ಸಿಬ್ಬಂದಿಯವರಾದ ಜಮೀಲ, ಅರುಣ್‌ಕುಮಾರ್, ವನೀತಾ, ಬಿಬ್ಲಿ ಬಾಚಯ್ಯ, ಸಿದ್ದಮ್ಮ, ಚಿರಂಜೀವಿ ಸೇರಿದಂತೆ ಶಾಲಾ ಶಿಕ್ಷಕರು, ಆಶಾ ಕಾರ್ಯಕರ್ತೆಯರು, ಶಾಲಾ ಮಕ್ಕಳು ಉಪಸ್ಥಿತರಿದ್ದರು.

## ನೇಮಕಾತಿ ಪ್ರಕಟಣೆ

ಬ್ಯಾಂಕ್ ಆಫ್ ಬರೋಡಾ (BOB) ನಲ್ಲಿ 419 ಸಹಾಯಕ ವ್ಯವಸ್ಥಾಪಕ, ವ್ಯವಸ್ಥಾಪಕ ಮತ್ತು ಇತರ ಹುದ್ದೆಗಳಿಗೆ ನೇಮಕಾತಿ 2026. ಯಾವುದೇ ಪದವಿ, CA, MBA/ PGDM, ICMAI ಪಾಸ್ ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಆನ್‌ಲೈನ್ ಅರ್ಜಿಯು 06–02–2026 ರಂದು ಪ್ರಾರಂಭವಾಗುತ್ತದೆ ಮತ್ತು 26–02–2026 ರಂದು ಮುಕ್ತಾಯಗೊಳ್ಳುತ್ತದೆ. ಅಭ್ಯರ್ಥಿಯು ಬ್ಯಾಂಕ್ ಆಫ್ ಬರೋಡಾ ವೆಬ್‌ಸೈಟ್, bankofbaroda.bank.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು.

## ಮರಾಠ ಅಭಿವೃದ್ಧಿ ನಿಗಮದಿಂದ ಆಹಾರ ವಾಹಿನಿ ಯೋಜನೆಗೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿನಲ್ಲಿ ಆಹಾರ ವಾಹಿನಿ (ಆಹಾರ ಕಿಯೋಸ್ಕ್) ಯೋಜನೆಯಡಿ ಅರ್ಹ ಅಭ್ಯರ್ಥಿಗಳಿಂದ ಸೇವಾಸಿಂಧು ತಂತ್ರಾಂಶದ ಮುಖಾಂತರ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಹಾರ ವಾಹಿನಿ (ಆಹಾರ ಕಿಯೋಸ್ಕ್) ಯೋಜನೆಯಡಿ ಸ್ಥಳಾಂತರಿಸಬಹುದಾದ ತಿಂಡಿ ಮಳಿಗೆಗಳನ್ನು ನಾಲ್ಕು ಚಕ್ರಗಳ ಇಗಿ–ಗೂಡ್ಸ್ ವಾಹನಗಳನ್ನು ಅಗತ್ಯಕ್ಕೆ ತಕ್ಕಂತೆ ನವೀಕರಿಸಿ ಫಲಾನುಭವಿಗಳಿಗೆ ವಿತರಿಸುವ ಯೋಜನೆಯಾಗಿದೆ.**

ನಿಗಮದಿಂದ ವಾಹನ ಖರೀದಿಗೆ 3.00 ಲಕ್ಷ ರೂ.ಗಳ ಸಹಾಯಧನವನ್ನು ಬಿಡುಗಡೆ ಮಾಡಲಾಗುವುದು ಉಳಿಕೆ ಮೊತ್ತವನ್ನು ಬ್ಯಾಂಕುಗಳ/ಹಣಕಾಸು ಸಂಸ್ಥೆಗಳಿಂದ ಸಾಲ ಪಡೆಯಬಹುದಾಗಿದೆ. ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳಾದ ರಾಯಚೂರು, ಸಿಂಧನೂರು ಕ್ಷೇತ್ರದ ಮರಾಠ ಜನಾಂಗದ ಹಿಂದುಳಿದ ವರ್ಗಗಳ ಪ್ರವರ್ಗ–3 ಬಿಅಡಿಯಲ್ಲಿ 2(ಎ)ರಿಂದ 2 (ಎಫ್) ವರೆಗೆ ಸೇರಿದವರಾಗಿರಬೇಕು. ಕುಟುಂಬದ ವಾರ್ಷಿಕ ವರಮಾನ 3,00,00 ರೂ.ಗಳ ಒಳಗಿರಬೇಕು. ಅರ್ಜಿದಾರರ ವಯಸ್ಸು 21 ರಿಂದ 45 ವರ್ಷಗಳಮಿತಿಯಲ್ಲಿರಬೇಕು. ಆಹಾರ ವಾಹಿನಿ (ಆಹಾರಕಿಯೋಸ್ಕ್) ಯೋಜನೆಯನ್ನುಪಡೆಯಲು ಮರಾಠ ಜನಾಂಗದಲ್ಲಿ ಪ್ರವರ್ಗ 3–ಬಿ ಅಡಿಯಲ್ಲಿ 2(ಎ) ರಿಂದ 2(ಎಫ್)ವರೆಗೆ ಬರುವ (ಎ)ಮರಾಠ, ಮರಾಠ, (ಬಿ)ಅರೆಕ್ಷತ್ರಿ, ಅರೆ ಮರಾಠ, ಆರ್ಯಾಮರಾಠ (ಸಿ)ಆರ್ಯ, ಆರ್ಯರು (ಡಿ) ಕೊಂಕಣ ಮರಾಠ (ಇ) ಕ್ಷತ್ರಿಯ ಮರಾಠ/ಕ್ಷತ್ರಿಯ ಮರಾಠ (ಎಫ್) ಕುಳವಾಡಿ ಜಾತಿಗಳಿಗೆ ಅನ್ವಯವಾಗುತ್ತದೆ. ಯೋಜನೆಯಡಿ ಸೌಲಭ್ಯ ಒದಗಿಸಲು ಸೇವಾಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡನಲ್ಲಿರುವಂತೆ ಅರ್ಜಿದಾರರ ಹೆಸರು (ಶ್ರೀ/ ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಬ್ಯಾಂಕ್ ಪಾಸ್ ಪುಸ್ತಕದಲ್ಲಿಯು ಇದ್ದು ಹೊಂದಾಣಿಕೆಯಾಗಬೇಕು. ಒಂದು ಬಾರಿ ನಿಗಮದ ಯಾವುದಾದರು ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವ ಮರಾಠ ಜನಾಂಗದ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನುಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್, ಮತ್ತು ಕರ್ನಾಟಕ ಒನ್, ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ದಿನಾಂಕ: 05.03.2026ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ನಿಗಮದ ವೆಬೆಸ್ಸೈಟ್ ವಿಳಾಸ: http://kmcdc.karnataka.gov.in/kn/ ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿರುತ್ತದೆ ಅಥವಾ ನಿಗಮದ ಸಹಾಯವಾಣಿ ಸಂಖ್ಯೆ: 080–29903994 ಮತ್ತು 8867537799 ಸಂಪರ್ಕಿಸಬಹುದಾಗಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

1ನೇ ಪುಟದಿಂದ....

ಯಶಸ್ವಿ ದಿನವಾಗಿರುತ್ತದೆ. ಪ್ರತಿದಿನ ಸಂತೋಷವಿದ್ದಂತೆ ಕಷ್ಟದ ಸಂದರ್ಭಗಳು ಇರುತ್ತವೆ. ಜನರ ಸಮಸ್ಯೆಗಳನ್ನು ಬಗೆಹರಿಸಬೇಕಾದರೆ ಅನೇಕ ಕಷ್ಟ ಕಾರ್ಪಣ್ಯಗಳು ಅಡೆ–ತಡೆಗಳು, ಟೀಕೆ, ಸವಾಲುಗಳು ಇದ್ದೇ ಇರುತ್ತವೆ ಎಂದು ಹೇಳಿದರು. ಬಜೆಟ್ ತಯಾರಿಕೆಯ ಪೂರ್ವಭಾವಿ ಸಭೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನಡೆಸುತ್ತಿದ್ದಾರೆ. ಇಂದು ತಮಗೆ ಸೇರಿದ ಇಲಾಖೆಗಳ ಸಭೆ ನಡೆಯಲಿದೆ. ತಾವು ದೆಹಲಿಗೆ ತೆರಳುವುದರಿಂದಾಗಿ ಸಭೆಯಲ್ಲಿ ಭಾಗವಹಿಸಲಾಗುತ್ತಿಲ್ಲ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅನುಮತಿ ಪಡೆದುಕೊಂಡಿದ್ದೇನೆ. ನಿನ್ನೆಯೇ ನಾನು ನಮ ಇಲಾಖೆಗಳ ಅಧಿಕಾರಿಗಳ ಜೊತೆ ಚರ್ಚೆ ನಡೆಸಿದ್ದೇನೆ. ದೆಹಲಿಯಿಂದ ವಾಪಸ್ ಬಂದ ಬಳಿಕ ಅಧಿಕಾರಿಗಳ ಜೊತೆ ಮತ್ತೊಮೆ ಚರ್ಚೆ ಮಾಡುತ್ತೇನೆ ಎಂದು ಹೇಳಿದರು. ದೇವನಹಳ್ಳಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ಮತ್ತೊಮೆ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ದೆಹಲಿ ಭೇಟಿಯ ವೇಳೆಯಲ್ಲಿ ಡಾ.ಯತೀಂದ್ರ ಸಿದ್ದರಾಮಯ್ಯ ಅವರ ವಿರುದ್ಧ ಹೈಕಮಾಂಡ್‌ಗೆ ದೂರು ನೀಡಲಾಗುತ್ತದೆಯೇ ಎಂದು ಪ್ರಶ್ನೆಗೆ, ತಾವು ಯಾರ ವಿರುದ್ಧವೂ ದೂರು ಹೇಳುವುದಿಲ್ಲ ಎಂದಿದ್ದಾರೆ.ನಾಯಕತ್ವದ ವಿಚಾರವಾಗಿ ಯಾರು ಮಾತನಾಡದಿರುವುದು ನನಗೆ ಮಾಡುವ ಸಹಾಯ ಎಂದು ಬೆಂಬಲಿಗರಿಗೆ ಹೇಳಿದ್ದಾರೆ.

# ಮಹರ್ಷಿ ವಾಲ್ಮೀಕಿ ಜಾತ್ರೆ: ಶಿಕ್ಷಣವೇ ಸಮಾಜದ ಶಕ್ತಿ ಶಿವನಗೌಡ ನಾಯಕ

ನೈಜ್ಯ ದೆಸೆ ನ್ಯೂಸ್



**ಹರಿಹರ (ದಾವಣಗೆರೆ): "ಇಂದು ನಾವು ಕೇವಲ ಜಾತ್ರೆ ಆಚರಿಸಲು ಇಲ್ಲಿಗೆ ಬಂದಿಲ್ಲ, ನಮ್ಮ ಸಮಾಜದ ಭವಿಷ್ಯವನ್ನು ರೂಪಿಸುವ ಸಂಕಲ್ಪ ಕೈಗೊಳ್ಳಲು ಸೇರಿದ್ದೇವೆ. ವಾಲ್ಮೀಕಿ ಸಮಾಜ ರಾಜ್ಯದ ನಾಲ್ಕನೇ ಬಹುದೊಡ್ಡ ಸಮಾಜ. ಸಂಖ್ಯೆಯಲ್ಲಿ ದೊಡ್ಡವರಾದರೂ ಶೈಕ್ಷಣಿಕವಾಗಿ ನಾವು ಎಷ್ಟು ಬಲಿಷ್ಠರಾಗಿದ್ದೇವೆ ಎಂಬ ಪ್ರಶ್ನೆಗೆ ಉತ್ತರ ಹುಡುಕಬೇಕಾದ ಸಮಯ ಈಗ ಬಂದಿದೆ" ಎಂದು ಮಾಜಿ ಸಚಿವ ಶಿವನಗೌಡ ನಾಯಕ ಹೇಳಿದರು.**

ಹರಿಹರ ತಾಲೂಕಿನ ರಾಜನಹಳ್ಳಿಯಲ್ಲಿ ಸೋಮವಾರ ನಡೆದ ಮಹರ್ಷಿ ವಾಲ್ಮೀಕಿ ಜಾತ್ರೆ ? ಸಮುದಾಯ ಜಾಗೃತಿಯ ಮಹಾ ಸಂಕಲ್ಪ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ವಾಲ್ಮೀಕಿ ಸಮಾಜದ ಮಕ್ಕಳಿಗೆ ಶಿಕ್ಷಣವೇ ನಿಜವಾದ ಶಕ್ತಿ ಎಂದರು. ಆ ಶಕ್ತಿಯನ್ನು ಸಮಾಜಕ್ಕೆ ಒದಗಿಸಲು ರಾಜನಹಳ್ಳಿ ಗುರುಪೀಠ ಶೈಕ್ಷಣಿಕವಾಗಿ ಇನ್ನಷ್ಟು ಬಲಿಷ್ಠವಾಗಬೇಕು. ಇದಕ್ಕಾಗಿ ಪಕ್ಷಭೇದ, ವೈಯಕ್ತಿಕ ಭಿನ್ನಾಭಿಪ್ರಾಯಗಳನ್ನು ಮರೆತು ಪೀಠಾಧ್ಯಕ್ಷರಾದ ಡಾ. ಪ್ರಸನ್ನಾನಂದ ಮಹಾಸ್ವಾಮಿಗಳೊಂದಿಗೆ ಎಲ್ಲರೂ ಒಗ್ಗಟ್ಟಾಗಿ ನಿಲ್ಲಬೇಕು ಎಂದು ಕರೆ ನೀಡಿದರು. ಇತರೆ ಸಮಾಜಗಳ ಮಠಗಳು ಶಿಕ್ಷಣ, ವಸತಿ, ವಿದ್ಯಾರ್ಥಿವೇತನ ಮತ್ತು ಮಾರ್ಗದರ್ಶನದ ಕ್ಷೇತ್ರದಲ್ಲಿ ಸಾಕಷ್ಟು ಮುನ್ನಡೆ ಸಾಧಿಸಿರುವುದನ್ನು ಉಲ್ಲೇಖಿಸಿದ ಅವರು, "ಸುತ್ತೂರು ಮಠ, ಸಿದ್ದಗಂಗಾ ಮಠಗಳಂತೆ ನಮ್ಮ ರಾಜನಹಳ್ಳಿ ಮಠವೂ ಬೆಳೆಯಬೇಕು.

ಹಾಗಾದರೆ ನಮ್ಮ ಶ್ರೀಮಠ ಮಾತ್ರ ಹಿಂದುಳಿಯಬೇಕೆ?" ಎಂದು ಪ್ರಶ್ನಿಸಿದರು. ಕೆಲ ಯುವಕರು ಕೇಳುತ್ತಿರುವ 'ಪೀಠಾಧ್ಯಕ್ಷರು ಸಮಾಜಕ್ಕೆ ಏನು ಕೊಟ್ಟಿದ್ದಾರೆ?' ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಶಿವನಗೌಡ ನಾಯಕ, "ನಾವು ಆಡುವ ಮಾತುಗಳು ಮರೆತು ಹೋಗುತ್ತವೆ, ಆದರೆ ಹೋರಾಟ ಮಾತ್ರ ಉಳಿಯುತ್ತದೆ" ಎಂದರು. ಮೀಸಲಾತಿ ಹೋರಾಟದ ಸಂದರ್ಭದಲ್ಲಿ ಅಪಾರ ಒತ್ತಡಗಳ ನಡುವೆಯೂ ಹಿಂದೆ ಸರಿಯದೇ ಸಮಾಜದ ಹಕ್ಕಿಗಾಗಿ ಹೋರಾಡಿದವರು ಡಾ. ಪ್ರಸನ್ನಾನಂದ ಮಹಾಸ್ವಾಮಿಗಳೇ. ಅವರ ಅಚಲ ಹೋರಾಟದ ಫಲವಾಗಿ ವಾಲ್ಮೀಕಿ ಸಮಾಜಕ್ಕೆ 7% ಮೀಸಲಾತಿ ದೊರಕಿತು. ಇದು ರಾಜ್ಯದ ಇತಿಹಾಸದಲ್ಲೇ ಚಿನ್ನದ ಅಕ್ಷರಗಳಲ್ಲಿ ಬರೆಯಲ್ಪಟ್ಟ ಹೋರಾಟವಾಗಿದೆ ಎಂದು ಹೇಳಿದರು. 7% ಮೀಸಲಾತಿ ಜಾರಿಗಾಗಿ ಕೇಂದ್ರ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ ಅವರು, ಲೋಕಸಭೆಯಲ್ಲಿ ಬಾಕಿ ಇರುವ ಮಸೂದೆ ತರಲು ವಿಳಂಬ ಮಾಡುತ್ತಿರುವುದು ದುರಾದೃಷ್ಟಕರ ಸಂಗತಿ ಎಂದರು. "ಕೇಂದ್ರ ಸಚಿವರು ಮಾತಾಡಲು ಮಾತ್ರ ಬರುತ್ತಿದ್ದಾರೆ.

ಒಂದು ಮಸೂದೆ ತರಲು ಇಷ್ಟು ದಿನ ಬೇಕೇ ಕೇಂದ್ರದ ಮೇಲೆ ಒತ್ತಡ ಹಾಕಿದರೆ ಒಂದೇ ದಿನದಲ್ಲಿ ಕೆಲಸ ಆಗುತ್ತದೆ" ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಮಾಜದ ಮಹನೀಯರನ್ನು ಸ್ಮರಿಸಿದ ಅವರು, ಆದಿಕವಿ ಮಹರ್ಷಿ ವಾಲ್ಮೀಕಿ, ಏಕಲವ್ಯ, ಮಾತೆ ಶಬರಿ, ವೀರ ಮದಕರಿ ನಾಯಕ, ವೀರ ಸಿಂಧೂರ ಲಕ್ಷ್ಮಣ, ರಾಜ ವೆಂಕಟಪ್ಪ ನಾಯಕ, ಸುರಪುರ ಎಲ್.ಜೆ. ಹಾವನೂರು ಮೊದಲಾದವರು ವಾಲ್ಮೀಕಿ ಸಮಾಜದ ಶಕ್ತಿಯ ಪ್ರತೀಕಗಳು ಎಂದು ಹೇಳಿದರು. ಪೀಠ ಸ್ಥಾಪನೆಗೆ ಕಾರಣರಾದ ಬಸಪ್ಪ ಜಗಳೂರು, ತಿಪ್ಪೇಸ್ವಾಮಿ ಸೇರಿದಂತೆ ವಿವಿಧ ಪಕ್ಷಗಳ ನಾಯಕರನ್ನು ಕೃತಜ್ಞತೆಯಿಂದ ಸ್ಮರಿಸಿದರು.

ಕಳೆದ 70 ವರ್ಷಗಳಿಂದ ರಾಜಕೀಯ ಪಕ್ಷಗಳು ವಾಲ್ಮೀಕಿ ಸಮಾಜವನ್ನು ನಿರ್ಲಕ್ಷ್ಯ ಮಾಡುತ್ತಲೇ ಬಂದಿವೆ ಎಂದು ಆರೋಪಿಸಿದ ಅವರು, ಸಮಾಜದ ಒಬ್ಬರೂ ಉಪಮುಖ್ಯವ ಂತ್ರಿಯಾಗದಿರುವುದು, ವಾಲ್ಮೀಕಿ ಹಗರಣದ ಸಂದರ್ಭದಲ್ಲಿ ಸಮಾಜದ ಸಚಿವರನ್ನೇ ಬಲಿಪಶು ಮಾಡಿರುವುದು, ಕಾರಣವಿಲ್ಲದೆ ಸಚಿವ ಸ್ಥಾನದಿಂದ ಕೈಬಿಟ್ಟ ಘಟನೆಗಳು ನಾಚಿಕೆಗೇಡಿನ ಸಂಗತಿಗಳಾಗಿವೆ ಎಂದರು. "ಕೇವಲ ಓಟಿಗಾಗಿ ನಮ್ಮ ಸಮಾಜವನ್ನು ಬಳಸಿಕೊಳ್ಳುವ ರಾಜ–ಕೀಯಕ್ಕೆ ನಾವು ಪ್ರಶ್ನೆ ಕೇಳಬೇಕಾದ ಸಮಯ ಬಂದಿದೆ" ಎಂದು ಹೇಳಿದರು.

"ಕಾಯಕವೇ ಕೈಲಾಸ, ದಾಸೋಹವೇ ಮಹಾದಾನ" ಎಂಬ ವಚನವನ್ನು ಸ್ಮರಿಸಿದ ಅವರು, ದುಡಿದು, ಕಲಿತು, ಹೋರಾಡಿ ಮುಂದೆ ಸಾಗಿದಾಗ ಮಾತ್ರ ಸಮಾಜಕ್ಕೆ ನಿಜವಾದ ಗೌರವ ಸಿಗುತ್ತದೆ. ಮಹನೀಯರು ಹಾಕಿಕೊಟ್ಟ ದಾರಿಯಲ್ಲಿ ನಡೆಯುವುದು ನಮ್ಮ ಕರ್ತವ್ಯ ಮಾತ್ರವಲ್ಲ, ಹೊಣೆಗಾರಿಕೆಯೂ ಹೌದು ಎಂದು ತಿಳಿಸಿದರು. ಕೊನೆಗೆ ಅವರು, ಶಿಕ್ಷಣಕ್ಕೆ ಬೆಂಬಲ ನೀಡೋಣ, ಗುರುಪೀಠವನ್ನು ಬಲಪಡಿಸೋಣ, ಒಗ್ಗಟ್ಟಿನಿಂದ ಮುಂದೆ ಸಾಗೋಣ ಎಂದು ಸಮಾಜದ ಬಂಧುಗಳಿಗೆ ಕರೆ ನೀಡಿದರು.

## ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು–ಜಂತುಹುಳು ರಹಿತ ಮಕ್ಕಳು,ಆರೋಗ್ಯವಂತ ಮಕ್ಕಳು ಕಾರ್ಯಕ್ರಮ



ನೈಜ್ಯ ದೆಸೆ ನ್ಯೂಸ್

**ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ಖ ಅ ಊ ವಿಭಾಗ ಹಾಗೂ ತಾಲೂಕು ಆರೋಗ್ಯ ಅಧಿಕಾ–ರಿಗಳ ಕಾರ್ಯಾಲಯ ಸಿಂಧನೂರು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಗಾಂಧಿನಗರಕ್ಕೆ ಒಳಪಡುವ ವಿರೂಪಾಪುರ ಆಯುಷ್ ಆರೋಗ್ಯ ಕೇಂದ್ರದ ವಾಪ್ತಿಯಲ್ಲಿ ಬರುವ 2ನೇ ಅಂಗನವಾಡಿ ಕೇಂದ್ರದಲ್ಲಿ ಇಂದು ಜಂತುಹುಳು ರಹಿತ ಮಕ್ಕಳು ಆರೋಗ್ಯವಂತ ಮಕ್ಕಳು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.**

ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಲಾಯಿತು ಸದರಿ ಕಾರ್ಯಕ್ರಮದಲ್ಲಿ ಶ್ರೀಮತಿ ಗೀತಾ ಹಿರೇಮಠ ಕ್ಷೇತ್ರ ಆರೋಗ್ಯ ಶಿಕ್ಷಣಧಿಕಾರಿ ತಾಲೂಕು ಅರೋಗ್ಯಾಧಿಕಾ–ರಿಗಳಕಾರ್ಯಾಲಯ ಸಿಂಧನೂರು ಇವರು ಮಾತನಾಡಿ ಬಯಲು ವಿಸರ್ಜನೆ ಮಾಡುವುದು, ರಕ್ತ ಹೀನತೆಯಿಂದ ಬಳಲುವುದು, ಅಪೌಷ್ಟಿತಿ–ಕತೆಯಿಂದ ಬಳಲುವುದು, ಹೊಟ್ಟೆ ಡುಮ್ಮ ಕೈಕಾಲು ಸಣ್ಣ ಇರುವುದು, ನಿಶಕ್ತಿ ಇರುವುದು, ಶಾಲಾ ಹಾಜರಾತಿ ಕಡಿಮೆ ಹಾಗುವುದು ಊಟ ಮಾಡಿದ ನಂತರ ಪದೇ ಪದೇ ಶೌಚಾಕ್ಕೆ ಹೋಗುವುದು ಮೇಲಿನ ಲಕ್ಷಣಗಳು ಕಂಡು ಬಂದರೆ ಜಂತುಹುಳು ನಿವಾರಣಾ ಮಾತ್ರೆ ನುಂಗಿಸುವುದು ಎಂದು ಗರ್ಭಿಣಿ ತಾಯಂದಿರಿಗೆ ಮಾಹಿತಿ ನೀಡಿದರು.

ನಂತರ ರಾಮಾಂಜನೇಯ ಕುಮಾರ್ RKSK ಆಪ್ತಸಮಾಲೋಚಕರು ಮಾತನಾಡಿ 1 ರಿಂದ 19 ವರ್ಷದೊಳಗೆ ಇರುವ ಎಲ್ಲಾ ಮಕ್ಕಳಿಗೆ ಮಾತ್ರೆ ನುಂಗಿಸುವುದು ಅವರ ದೈಹಿಕ ಹಾಗೂ ಮಾನಸಿಕ ಬೆಳವಣಿಗೆ ಕುಂಠಿತವಾಗಬಲ್ಲದು ಜಂತುಹುಳು ಭದವನ್ನು ನಿಯಂತ್ರಿಸಲು ಕೈಕಾಲು ತೊಳೆಯುವುದು, ಉಗುರುಗಳನ್ನು ಕತ್ತರಿಸುವುದು, ಶೌಚಾಲಯ ಬಳಸಿದ ನಂತರ ಕೈ ತೊಳೆಯುವುದು, ವಯಕ್ತಿಕ ಸ್ವಚ್ಛತೆ ಕಾಪಾಡಿಕೊಳ್ಳಬೇಕು ಎಂದು ಹೇಳಿದರು ಈ ಸಂದರ್ಭದಲ್ಲಿ ಇಸ್ಮಾಲ ಬಿ PHCO, ಶ್ರೀದೇವಿ ಅಊಔ, ಭೀಮಮ್ಮ, ಭಾರತಿ ಆಶಾ ಕಾರ್ಯಕರ್ತೆಯರು,ತೆರೆಜ ಅಂಗನವಾಡಿ ಸಹಾಯಕಿ ಗರ್ಭಿಣಿ ತಾಯಂದಿರು ಭಾಗವಹಿಸಿದ್ದರು.

# ಸರ್ವಜ್ಞ ವಿದ್ಯಾಪೀಠ: ಅನೀಮಿಯಾ ತಡೆಗಟ್ಟುವ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್



**ತಾಳಿಕೋಟಿ: ಪಟ್ಟಣದ ಸರ್ವಜ್ಞ ವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥ–ಮಿಕ ಹಾಗೂ ಪ್ರೌಢಶಾಲೆಯಲ್ಲಿ ಮಂಗಳವಾರ ಅನೀಮಿಯಾ ಮುಕ್ತ ಭಾರತ ನಿಮಿತ್ಯವಾಗಿ ಅನೀಮಿಯಾ ತಡೆಗಟ್ಟುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಸರ್ವಮಂಗಲ ಫ್ಯಾಮಿಲಿ ಟ್ರಸ್ಟ್ ಮತ್ತು ಸಂಘ ಸಂಸ್ಥೆಗಳ ಪ್ರಯೋಜ–ಕರು ರಕ್ತಹೀನತೆ ರಕ್ತದಲ್ಲಿನ ಹಿಮೋಗ್ಲೋಬಿನ್ ಸಾಮಾನ್ಯಗಿಂತ ಕಡಿಮೆ ಇರುವುದು.**

ಮತ್ತು ಹಿಮೋಗ್ಲೋಬಿನ್ ಮಟ್ಟವನ್ನು ವಿದ್ಯಾರ್ಥಿಗಳಿಗೆ ತಪಾಸಣೆ ಮಾಡಲಾಯಿತು. ಮತ್ತು ರಕ್ತ ಹೀನತೆಯನ್ನು ನಾವು ಹೇಗೆ ತಡೆಗಟ್ಟುವುದು ಕಬ್ಬಿಣ ಅಂಶದ ಆಹಾರವನ್ನು ಸೇವಿಸುವ ಆರೋಗ್ಯ ವಾರಿ ಕುರಿತು ಕಬ್ಬಿಣದ ಪೂರಕ ಸೇವನೆ ಮಾಡುವಾಗ ಗಮನಿಸಬೇಕಾದ ಅಂಶಗಳ ಕುರಿತು ರಕ್ತ ಹೀನತೆ ಇದೆ ಎಂದು ಹೇಗೆ ತಿಳಿಯುವುದು ಹಿಮೋಗ್ಲೋಬಿನ್ ಮಟ್ಟವನ್ನು ತಿಳಿಯುವುದರ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿಯನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಸಿದ್ದನಗೌಡ ಮಂಗಳೂರ, ಮುಖ್ಯ ಗುರುಗಳಾದ ಸಂತೋಷ ಪವಾರ, ದೈಹಿಕ ಶಿಕ್ಷಕ ಶಾಂತಗೌಡ ಬಿರಾದಾರ, ರವಿಕುಮಾರ ಮಲಾಬಾದಿ, ಕಾರ್ಯಕ್ರಮದ ಸಂಯೋಜಕರಾದ ಶಾಂತಾಬೆಲಾಳ, ಸಿಬ್ಬಂದಿ ವರ್ಗದವರಾದ ಸೋಮು ಸಜ್ಜನ್, ಧನಪಾಲ, ಶಕುಂತಲಾ ಮಠ ಕುಸುಮಾ ಮಠ ಇದ್ದರು.

# ಭೂಮಿಕಾ ಜ್ಞಾನ ವಿಕಾಸ ಕೇಂದ್ರದಲ್ಲಿ ಹೊಲಿಗೆ ತರಬೇತಿ ಸಮಾರೋಪ

ನೈಜ್ಯ ದೆಸೆ ನ್ಯೂಸ್



**ಮುದ್ದೇಬಿಹಾಳ: ತಾಲೂಕಿನ ತಂಗಡಗಿ ವಲಯದ ರಕ್ಕಸಗಿ ಕಾರ್ಯಕ್ಷೇತ್ರದ ಭೂಮಿಕಾ ಜ್ಞಾನ ವಿಕಾಸ ಕೇಂದ್ರದಲ್ಲಿ ಮೂರು ತಿಂಗಳ ಕಾಲ ನಡೆದ ಹೊಲಿಗೆ ತರಬೇತಿ ಕಾರ್ಯಕ್ರಮದ ಸಮಾರೋಪ ಸಮಾರಂಭ ಇತ್ತೀಚೆಗೆ ನಡೆಯಿತು.**

ಕಾರ್ಯಕ್ರಮದಲ್ಲಿ ಅಥಿತಿಯಾಗಿ ಮಾತನಾಡಿದ ಶಿಕ್ಷಕಿ ಜಲಜಾಕ್ಷಿ ನಾಡಗೌಡರ ಅವರು, ಧರ್ಮಸ್ಥಳ ಸಂಸ್ಥೆ ಸಮಾಜಮುಖಿ ಕಾರ್ಯಗಳ ಮೂಲಕ ಗ್ರಾಮೀಣ ಮಹಿಳೆಯರ ಸಬಲೀಕರಣಕ್ಕೆ ಮಹತ್ವದ ಕೊಡುಗೆ ನೀಡುತ್ತಿದೆ ಎಂದು ಹೇಳಿದರು. ಮಹಿಳೆಯರು ಇಂತಹ ತರಬೇತಿಗಳ ಸದುಪಯೋಗ ಪಡೆದು ಸ್ವಾವಲಂಬಿ ಜೀವನ ನಡೆಸಬೇಕು ಎಂದು ಸಲಹೆ ನೀಡಿದರು. ಕ್ಷೇತ್ರ ಯೋಜನಾಧಿಕಾರಿ ಶಿವಾನಂದ ಪಿ. ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಪೂಜ್ಯರ ಮಾರ್ಗದರ್ಶನದಲ್ಲಿ ಸಮಾಜ–ಕ್ಕೆ ಉಪಯುಕ್ತವಾದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ. ಜ್ಞಾನ ವಿಕಾಸ ಕೇಂದ್ರಗಳ ಮೂಲಕ ಮಹಿಳೆಯರ ಸರ್ವಾಂಗೀಣ ಅಭಿವೃದ್ಧಿಗೆ ಅವಕಾಶ ಸೃಷ್ಟಿಯಾಗುತ್ತಿದೆ, ಹೊಲಿಗೆ ತರಬೇತಿ ಮಹಿಳೆಯರಿಗೆ ಸ್ವಯಂ ಉದ್ಯೋಗದ ದಾರಿಯನ್ನು ತೆರೆದಿಡುತ್ತದೆ, ತರಬೇತಿ ಪಡೆದ ಅಭ್ಯರ್ಥಿಗಳು ತಮ್ಮ ಅಭಿಪ್ರಾಯವನ್ನು ಹಂಚಿಕೊಂಡು,

ಈ ತರಬೇತಿ ಜೀವನೋಪಾಯಕ್ಕೆ ದಾರಿದೀಪವಾಗಿದ್ದು, ಸ್ವತಃ ಬಟ್ಟೆಗಳನ್ನು ತಯಾ–ರಿಸುವುದಕ್ಕೂ ಇತರರಿಗೆ ಹೊಲಿಗೆ ಕೆಲಸ ಮಾಡುವುದಕ್ಕೂ ಸಹಕಾರಿಯಾಗಲಿದೆ ಎಂದು ಸಂತೋಷ ವ್ಯಕ್ತಪಡಿಸಿದರು. ಮೂರು ತಿಂಗಳ ಕಾಲ ನಡೆದ ಈ ತರಬೇತಿಯಲ್ಲಿ 40 ಮಂದಿ ಅಭ್ಯರ್ಥಿಗಳು ಭಾಗವಹಿಸಿ ಪ್ರಯೋಜನ ಪಡೆದಿದ್ದು, ಕಾರ್ಯಕ್ರಮದಲ್ಲಿ ಅವ–ರಿಗೆ ಪ್ರಮಾಣಪತ್ರಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಸಂಗಪ್ಪ ಹಿರೇಗೌಡ, ಹನುಮಂತ ಮೇಟಿ, ನಾಗಮ್ಮ ಹುಣಶ್ಯಾಳ (ಒಕ್ಕೂಟದ ಅಧ್ಯಕ್ಷರು), ಸುಮಾ (ಹೊಲಿಗೆ ತರಬೇತಿ ಶಿಕ್ಷಕಿ), ಸುಜಾತ ನಾಯಕ್ (ಜ್ಞಾನ ವಿಕಾಸ ಸಮನ್ವಯಾಧಿಕಾರಿ), ಶಂಕ್ರುಬಾಯಿ, ದೀಪ ಹಿರೇಕುಂಬ, ಅನ್ನಪೂರ್ಣ ಸೇವಾ ಪ್ರತಿನಿಧಿಗಳು ಹಾಗೂ ಜ್ಞಾನ ವಿಕಾಸ ಕೇಂದ್ರದ ಸದಸ್ಯರು ಉಪಸ್ಥಿತರಿದ್ದರು.

# ಶ್ರೀಶೈಲಂ ಜಾತ್ರೆಯ ಅಂಗವಾಗಿ ವಿಶೇಷ ಬಸ್ಸುಗಳ ಕಾರ್ಯಾಚರಣೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ದಿನಾಂಕ: 19.02.2025 ರಿಂದ 01.03.2025ರವರೆಗೆ ಶ್ರೀ ಶೈಲಂ ಜಾತ್ರೆಯು ನಡೆಯುತ್ತಿದ್ದು, ದಿನಾಂಕ: 27.02.2025 ರಂದು ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಶ್ರೀಶೈಲ ಶ್ರೀ ಮಲ್ಲಿಕಾರ್ಜುನ ಸ್ವಾಮಿಯ ರಥ–ೋತ್ಸವ ಜರುಗಲಿದೆ. ಈ ಜಾತ್ರೆಗೆ ಪ್ರತಿ ವರ್ಷದಂತೆ ಈ ವರ್ಷವು ಸಹ ರಾಯಚೂರು ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಯಚೂರು, ಲಿಂಗಸೂಗುರು, ಸಿಂಧನೂರು, ಮಾನವಿ, ದೇವದುರ್ಗ, ಮಸ್ಕಿ ಘಟಕಗಳಿಂದ ವಿಶೇಷ ಬಸ್ಸುಗಳನ್ನು ಕಾರ್ಯಾಚರಣೆಗೆ ತರಲಾಗುತ್ತಿದೆ.**



ಈ ಬಸ್ಸುಗಳು ದಿನಾಂಕ: 19.02.2025 ರಿಂದ 01.03.2025ರವರೆಗೆ ರಾಯಚೂರು–ಕರ್ನೂಲ್–ಶ್ರೀಶೈಲಂ, ಸಿಂಧನೂರು–ಆದೋನಿ–ಶ್ರೀಶೈಲಂ, ಸಿಂಧನೂರು–ರಾಯಚೂರು–ಕರ್ನೂಲ್–ಶ್ರೀಶೈಲಂ, ಲಿಂಗಸೂಗುರು–ರಾಯಚೂರು–ಕರ್ನೂಲ್–ಶ್ರೀಶೈಲಂ, ಲಿಂಗಸೂಗುರು–ಮಸ್ಕಿ–ಸಿಂಧನೂರು–ಆದೋನಿ–ಶ್ರೀಶೈಲಂ, ಮಾನವಿ–ರಾಯಚೂರು–ಕರ್ನೂಲ್–ಶ್ರೀಶೈಲಂ,ದೇವದುರ್ಗ–ರಾಯಚೂರು–ಕರ್ನೂಲ್–ಶ್ರೀಶೈಲಂ, ಮಸ್ಕಿ–ರಾಯಚೂರು–ಕರ್ನೂಲ್–ಶ್ರೀಶೈಲಂ, ಮಸ್ಕಿ–ಸಿಂಧನೂರು–ಆದೋನಿ–ಶ್ರೀಶೈಲಂ ಮಾರ್ಗದಲ್ಲಿ ಕಾರ್ಯಾಚರಣೆಗೆ ತರಲಾಗುತ್ತಿದೆ. 50 ಪ್ರಯಾಣಿಕರು ಲಭ್ಯವಿದ್ದಲ್ಲಿ ಅವರ ಸ್ವ–ಸ್ಥಳದಿಂದ ನೇರವಾಗಿ ಶ್ರೀಶೈಲಂಗೆ ಬಸ್ಸು ವ್ಯವಸ್ಥೆಯನ್ನು ಒದಗಿಸುವದಕ್ಕೆ ಕ್ರಮವನ್ನು ತೆಗೆದುಕೊಳ್ಳಲಾಗಿದೆ. ಹಾಗೂ ಪ್ರಯಾಣಿಕರು ಮಹಾನಂದಿಗೆ ಹೋಗುವದಕ್ಕೆ ಇಷ್ಟ ಪಟ್ಟಲ್ಲಿ ಅಲ್ಲಿಗೆ ಕರೆದುಕೊಂಡು ಹೋಗಿ ಬರಲಾಗುತ್ತದೆ.

ಶ್ರೀಶೈಲಂಗೆ ಹೋಗಿ ಬರುವ ಪ್ರಯಾಣಿಕರು, ಈ ವಿಶೇಷ ಬಸ್ಸುಗಳ ಸೌಕರ್ಯವನ್ನು ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 1ನೇ ಘಟಕ ರಾಯಚೂರು: 7760992363, 2ನೇ ಘಟಕ ರಾಯಚೂರು: 7760992364, 3ನೇ ಘಟಕ ರಾಯಚೂರು: 7619351087, ಲಿಂಗಸೂಗುರು: 7760992365, ಸಿಂಧನೂರು: 7760992366, ಮಾನವಿ: 7760992367, ದೇವದುರ್ಗ: 7760992368, ಮಸ್ಕಿ: 7760992361 ಹಾಗೂ ವಿಭಾಗೀಯ ಸಂಚಾರ ಅಧಿಕಾರಿಗಳ ಸಂಖ್ಯೆ: 7760992352ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ರಾಯಚೂರು ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಚಂದ್ರಶೇಖರ ಎಂ.ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಕ್ಷಣ ಮಾರ್ಗದರ್ಶಿ ವಿಶೇಷ

# B.Com LLB

B.Com LLB ಬಿಕಾಂ ಎಲ್‌ಎಲ್‌ಬಿ ಕಾರ್ಯಕ್ರಮವು ಕಾನೂನು ಮತ್ತು ವ್ಯವಹಾರವನ್ನು ಸಂಯೋಜಿಸುವ ಐದು ವರ್ಷಗಳ ಸಂಯೋಜಿತ ಕಾನೂನು ಪದವಿ ಕಾರ್ಯಕ್ರಮವಾಗಿದ್ದು, ಕಾರ್ಪೊರೇಟ್ ಕಾನೂನಿನಲ್ಲಿ ಆಸಕ್ತಿ ಹೊಂದಿರುವವರಿಗೆ ಇದು ಸೂಕ್ತ ಆಯ್ಕೆಯಾಗಿದೆ. ವಿದ್ಯಾರ್ಥಿಗಳು ತಮ್ಮ ಪ್ರತಿಭೆ ಮತ್ತು ಆಸಕ್ತಿಗಳನ್ನು ಅವಲಂಬಿಸಿ ವ್ಯವಹಾರ ಕಾನೂನು, ಕಾರ್ಪೊರೇಟ್ ಕಾನೂನು ಮತ್ತು ತೆರಿಗೆಯಂತಹ ಕಾನೂನಿನ ನಿರ್ದಿಷ್ಟ ಕ್ಷೇತ್ರಗಳಲ್ಲಿ ಪರಿಣತಿಯನ್ನು ಪಡೆಯಲು ನಿರ್ಧರಿಸಬಹುದು. ಲಾಯ್ಡ್ ಕಾನೂನು ಕಾಲೇಜಿನಲ್ಲಿ, ಬಿ.ಕಾಂ ಎಲ್‌ಎಲ್‌ಬಿ ಇಂಟಿಗ್ರೇಟೆಡ್ ಕೋರ್ಸ್ ಅನ್ನು ಕ್ರಿಯಾತ್ಮಕ ಪದವಿಪೂರ್ವ ಕಾರ್ಯಕ್ರಮವಾಗಿ ನೀಡಲಾಗುತ್ತದೆ, ಇದು ವಿಧಿವಿಜ್ಞಾನ ವಿಜ್ಞಾನದಲ್ಲಿ ಕೆಲವು ಅಂತರಶಿಸ್ತೀಯ ಪ್ರಮಾಣಪತ್ರ ಮತ್ತು ವೃತ್ತಿಪರ ಕೋರ್ಸ್‌ಗಳನ್ನು ಅನ್ವೇಷಿಸುವ ಮೂಲಕ ಹಾಗೂ 25 ಕ್ಕೂ ಹೆಚ್ಚು ಜಾಗತಿಕವಾಗಿ ಪ್ರಸ್ತುತವಾದ ಪ್ರಮಾಣಪತ್ರ ಕೋರ್ಸ್‌ಗಳು ಮತ್ತು ಕ್ಯಾಂಪಸ್‌ನಲ್ಲಿರುವ 20+ ಕೌಶಲ್ಯ ಅಭಿವೃದ್ಧಿ ಕೇಂದ್ರಗಳಿಗೆ ಪ್ರವೇಶವನ್ನು ನೀಡುವ ಮೂಲಕ ವರ್ಧಿಸುತ್ತದೆ. (ಬ್ಯಾಚುಲರ್ ಆಫ್ ಕಾಮರ್ಸ್ + ಬ್ಯಾಚುಲರ್ ಆಫ್ ಲೆಜಿಸ್ಲೇಟಿವ್ ಲಾ) 5 ವರ್ಷಗಳ ಸಮಗ್ರ (Integrated) ಕಾನೂನು ಪದವಿಯಾಗಿದೆ. ಇದು ವಾಣಿಜ್ಯ ಮತ್ತು ಕಾನೂನು ಎರಡನ್ನೂ ಸಂಯೋಜಿಸುವ ಕೋರ್ಸ್ ಆಗಿದ್ದು, ಕಾರ್ಪೊರೇಟ್ ಕಾನೂನು, ತೆರಿಗೆ, ಮತ್ತು ವ್ಯಾಪಾರ ಕಾನೂನುಗಳಲ್ಲಿ ವೃತ್ತಿಜೀವನವನ್ನು ಬಯಸುವವರಿಗೆ ಸೂಕ್ತವಾಗಿದೆ. ಇದು ಹತ್ತು ಸೆಮಿಸ್ಟರ್‌ಗಳನ್ನು ಒಳಗೊಂಡಿದ್ದು, 10+2 ವಿದ್ಯಾರ್ಹತೆ ಅಗತ್ಯವಿದೆ. Shiksha Shiksha +2 B.Com LLB ಕೋರ್ಸ್‌ನ ಪ್ರಮುಖ ವಿವರಗಳು: ಅವಧಿ: 5 ವರ್ಷಗಳು (ಸಮಗ್ರ/Integrated ಕೋರ್ಸ್). ಅರ್ಹತೆ: ಮಾನ್ಯತೆ ಪಡೆದ ಮಂಡಳಿಯಿಂದ 10+2 ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕನಿಷ್ಠ 45–50% ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು (ಮೀಸಲಾತಿ ವರ್ಗಗಳಿಗೆ ಸಡಿಲಿಕೆ ಇರುತ್ತದೆ). ಪ್ರವೇಶ ಪ್ರಕ್ರಿಯೆ: ಪ್ರವೇಶ ಪರೀಕ್ಷೆಗಳಾದ ಅಐಂಖಿ, ಖಐಂಖಿ, ಐಖಂಖಿ, ಅಥವಾ ಆಯಾ ರಾಜ್ಯಗಳ ಕಾನೂನು ಪ್ರವೇಶ ಪರೀಕ್ಷೆಗಳ ಮೂಲಕ (ಉದಾಹರಣೆಗೆ ಕರ್ನಾಟಕದಲ್ಲಿ ಏಖಐಗ ಪ್ರವೇಶ). ಪಠ್ಯಕ್ರಮ: ಅಕೌಂಟೆನ್ಸಿ, ಮ್ಯಾನೇಜ್‌ಮೆಂಟ್, ಅರ್ಥಶಾಸ್ತ್ರ, ಕಂಪನಿ ಕಾನೂನು, ತೆರಿಗೆ ಕಾನೂನು, ಸಾಂವಿಧಾನಿಕ ಕಾನೂನು, ಮತ್ತು ಟೋರ್ಟ್ಸ್ ಕಾನೂನು ಮುಂತಾದ ವಿಷಯಗಳನ್ನು ಒಳಗೊಂಡಿದೆ. ವೃತ್ತಿ ಅವಕಾಶಗಳು: ಕಾರ್ಪೊರೇಟ್ ವಕೀಲರು, ಕಾನೂನು ಸಲಹೆಗಾರರು, ತೆರಿಗೆ ಸಲಹೆಗಾರರು, ಕಂಪನಿ ಕಾರ್ಯದರ್ಶಿ (CS), ಮತ್ತು ಕಾನೂನು ಏಜೆನ್ಸಿಗಳಲ್ಲಿ ಉದ್ಯೋಗ. Lloyd Law College Lloyd Law College +3 ಪ್ರಮುಖ ಮುಖ್ಯಾಂಶಗಳು: ಈ ಕೋರ್ಸ್ ವಿದ್ಯಾರ್ಥಿಗಳಿಗೆ ವಾಣಿಜ್ಯ ಮತ್ತು ಕಾನೂನಿನ ವಿಶಿಷ್ಟ ಮಿಶ್ರಣದ ಜ್ಞಾನವನ್ನು ನೀಡುತ್ತದೆ. ಹೆಚ್ಚಿನ ವಿಶ್ವವಿದ್ಯಾಲಯಗಳಲ್ಲಿ ಬೋಧನಾ ಮಾಧ್ಯಮವು ಇಂಗ್ಲಿಷ್ ಆಗಿರುತ್ತದೆ. ಕೋರ್ಸ್ ಮುಗಿದ ನಂತರ, ವಿದ್ಯಾರ್ಥಿಗಳು ಬಾರ್ ಕೌನ್ಸಿಲ್ ಆಫ್ ಇಂಡಿಯಾದಲ್ಲಿ ನೋಂದಾಯಿಸಿಕೊಳ್ಳಬಹುದು.

## ಜನನಿ ಪಿಯು ಕಾಲೇಜನಲ್ಲಿ ಬಿಳ್ಕೊಡುಗೆ ಸಮಾರಂಭ

ನೈಜ್ಯ ದೆಸೆ ನ್ಯೂಸ್

**ಹಾಲಾಪೂರ: ಗ್ರಾಮದಲ್ಲಿರುವ ಜನನಿ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ ನಡೆಯಿತು. ಕಾರ್ಯಕ್ರಮದ ಉದ್ಘಾಟನೆಯನ್ನು ಶ್ರೀ ದಂಡಗುಂಡಪ್ಪ ತಾತ ಜಂಗಮರಹಳ್ಳಿ ಉದ್ಘಾಟಿಸಿದರು.**



ವಿಶೇಷ ಉಪನ್ಯಾಸಕರಾಗಿ ಈರಪ್ಪ ಶಿಕ್ಷಕರು ಆಗಮಿಸಿ ಮಾತನಾಡುತ್ತಾ ವಿದ್ಯಾರ್ಥಿಗಳು ಜೀವನದಲ್ಲಿ ಯಶಸ್ಸು ಕಾಣಬೇಕಾದರೆ ನಿರಂತರ ಓದು, ಕಠಿಣ ಪರಿಶ್ರಮ ಗುರು ಹಿರಿಯರಿಗೆ ಗೌರವ ಕೊಡುವುದರ ಮೂಲಕ ಸಮಾಜದಲ್ಲಿ ಆದರ್ಶ ಪ್ರಾಯರಾಗಿ ಬದುಕಬೇಕು, ಇಂದು ಸ್ಪರ್ಧಾ ಯುಗ ಹೀಗಾಗಿ ಅಧ್ಯಯನ ಬಹಳಷ್ಟು ಮುಖ್ಯ ಈ ದಿಶೆಯಲ್ಲಿ ಕಾರ್ಯಪ್ರವೃತ್ತರಾಗಿ ಉನ್ನತ ಹುದ್ದೆ ಹೊಂದಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಕಾಲೇಜು ಪ್ರಾಚಾರ್ಯರಾದ ನಾಗೇಶ ಜಂಗಮರಹಳ್ಳಿ, ವೆಂಕೋಬ ದೇವಪೂರ ಪ್ರಾಚಾರ್ಯರು, ಸುಭಾಷ್ ಸಿಂಗ್ ಹಜಾರೆ ಮುಖ್ಯ ಗುರುಗಳು, ಸಿದ್ದು ಬಿ, ಶ್ರೀಕಾಂತಮ್ಮ ಮುಖ್ಯ ಶಿಕ್ಷಕಿ, ಉಪನ್ಯಾಸಕರಾದ ರಾಮಣ್ಣ ನಾಯಕ, ಸಿದ್ದಾರ್ಥ ಪೊ. ಪಾ, ಮರಿಸ್ವಾಮಿ, ವೀರೇಶ ಜೆ, ಹುಸೇನಬಾಷಾ, ಪರಶುರಾಮ, ದುರಗೇಶ ಹಾಗೂ ಶಿಕ್ಷಕಿಯರು ಇದ್ದರು ನಂತರ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರಗಿದವು.

## ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಜಿಲ್ಲಾ ಯುವ ಘಟಕ ಪ್ರಧಾನ ಕಾರ್ಯದರ್ಶಿಯಾಗಿ ಚನ್ನಪ್ಪ ಕೆ ಹೊಸಹಳ್ಳಿ ಹಾಗೂ ಸಂಘಟನಾ ಕಾರ್ಯದರ್ಶಿಯಾಗಿ ರಾಜು ಪತ್ತಾರ ಬಳಗಾನೂರ ಆಯ್ಕೆ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಸಂಸ್ಥಾಪಕ ರಾಜ್ಯಾಧ್ಯಕ್ಷರು ಹಾಗೂ ಮಾಜಿ ವಿಧಾನ ಪರಿಷತ್ ಸದಸ್ಯರಾದ ಕೆ.ಪಿ.ನಂಜುಂಡಿ ವಿಶ್ವಕರ್ಮ ಅವರ ಆದೇಶದ ಮೇರೆಗೆ ಅ.ಕ.ವಿ.ಮ ರಾಜ್ಯ ಪ್ರಧಾನ ಕಾರ್ಯದರ್ಶಿ ಬ್ರಹ್ಮಗಣೇಶ ವಕೀಲರು,**

ರಾಜ್ಯ ಕಾರ್ಯದರ್ಶಿ ಸೋಮಣ್ಣ ಪತ್ತಾರ ಸುಕಲಪೇಟೆ,ಜಿಲ್ಲಾ ಘಟಕದ ಅಧ್ಯಕ್ಷ ಮಾರುತಿ ಬಡಿಗೇರ, ರಾ.ಜಿ.ವಿ.ಸ.ಜಿಲ್ಲಾಧ್ಯಕ್ಷರಾದ ಉದಯಕುಮಾರ ಪತ್ತಾರ ಮಸ್ಕಿ,ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ.ರಾಮು ಗಾಣಧಾಳ,ಅ.ಕ.ವಿ.ಮ ಜಿಲ್ಲಾ ಯುವ ಘಟಕ ಅಧ್ಯಕ್ಷ ಸುರೇಶ ಸಂಗಾಪುರ,ಸಿಂಧನೂರು ಹಿರಿಯ ಮುಖಂಡರಾದ ವೀರೇಶ ದೇವರಗುಡಿ ಹಾಗೂ ಜಿಲ್ಲೆಯ 8 ತಾಲೂಕುಗಳ ಹಿರಿಯ ಕಿರಿಯ ಸಮಾಜದ ಮುಖಂಡರು ನೇತೃತ್ವದಲ್ಲಿ ರಾಯಚೂರಿನ ಬೇರೂನಕಿಲ್ಲಾದ ಶ್ರೀ ಕಾಳಿಕಾದೇವಿ ದೇವಸ್ಥಾನದಲ್ಲಿ ನಡೆದ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳ ಆಯ್ಕೆ ಸಭೆಯಲ್ಲಿ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ರಾಯಚೂರು ಜಿಲ್ಲಾ ಯುವ ಘಟಕ





ಪ್ರಧಾನ ಕಾರ್ಯದರ್ಶಿಯಾಗಿ ಸಿಂಧನೂರಿನ ಚನ್ನಪ್ಪ ವಿಶ್ವಕರ್ಮ ಕೆ.ಹೊಸಹಳ್ಳಿ ಮತ್ತು ಸಂಘಟನಾ ಕಾರ್ಯದರ್ಶಿಯಾಗಿ ರಾಜು ಪತ್ತಾರ ಬಳಗಾನೂರ ಅವರನ್ನು ಸರ್ವಾನುಮತದಿಂದ ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಚನ್ನಪ್ಪ ಕೆ ಹೊಸಹಳ್ಳಿ ಅವರು ರಾಜ್ಯಾಧ್ಯಕ್ಷರಾದ ಕೆ.ಪಿ.ನಂಜುಂಡಿ ಅವರು ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ವಧುವರರ ಸಮಾವೇಶ ಮೇಲುಸ್ತುವಾರಿಯಾಗಿ,ಪಾದಯಾತ್ರೆ, ಬೆಂಗಳೂರಿನ ಸಂಘಟನಾ ಸಭೆಗಳಲ್ಲಿ ಭಾಗವಸುವ ಮೂಲಕ ಒಡನಾಡಿಯಾಗಿ ಅವರ ಮಾರ್ಗದರ್ಶನದಲ್ಲಿ ಸಮಾಜ ಸೇವೆಯಲ್ಲಿ ತೊಡಗಿಕೊಂಡು ತಮ್ಮದೇ ಆದ ಕೊಡುಗೆ ನೀಡಿದ್ದಾರೆ,ಹಲವಾರು ಜಿಲ್ಲಾ ಮಟ್ಟದ ಸಂಘಟನಾ ಸಭೆಗಳಲ್ಲಿ ಭಾಗವಹಿಸಿ ಯುವಕರನ್ನು ಸಂಘಟನೆಯಲ್ಲಿ ಸಕ್ರಿಯವಾಗಿ ಪಾಲ್ಗೊಳುವಂತೆ ಮಾಡುತ್ತಿದ್ದಾರೆ.ಜೊತೆಗೆ ತಾಲೂಕಿನಲ್ಲಿ ಸಂಘಟನಾ ಕಾರ್ಯದರ್ಶಿಯಾಗಿ ಸಮಾಜವನ್ನು ಸಂಘಟಿಸುತ್ತಿದ್ದಾರೆ.

ಸಮಾಜದ ಮೇಲಿನ ಅಪಾರ ಕಾಳಜಿಯನ್ನು ಗುರುತಿಸಿ ಜಿಲ್ಲೆಯಲ್ಲಿ ಸಮಾಜ ಸಂಘಟನೆಯನ್ನು ಬಲಪಡಿಸಲೆಂದು ಮತ್ತು ಕೆ.ಪಿ.ನಂಜುಂಡಿ ವಿಶ್ವಕರ್ಮ ಅವರ ಕಾರ್ಯಗಳಲ್ಲಿ ಯುವಕರನ್ನು ಹೆಚ್ಚು ಹೆಚ್ಚು ಉತ್ಸಾಹದಿಂದ ಸಂಘಟನೆಯಲ್ಲಿ ಸಕ್ರಿಯವಾಗಿ ಪಾಲ್ಗೊಳುವಂತೆ ಮಾಡುವ ಹಿತ ದೃಷ್ಟಿಯಿಂದ ಚನ್ನಪ್ಪ ಕೆ.ಹೊಸಹಳ್ಳಿ ಮತ್ತು ಸಂಘಟನಾ ಕಾರ್ಯದರ್ಶಿಯಾಗಿ ರಾಜು ಬಳಗಾನೂರು ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು ಎಂದು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ರಾಜ್ಯ ಕಾರ್ಯದರ್ಶಿ ಸೋಮಣ್ಣ ಸುಕಲಪೇಟೆ ಅವರು ತಿಳಿಸಿದರು.

ಈ ಸಂಧರ್ಭದಲ್ಲಿ ಸಮಾಜದ ಮುಖಂಡರಾದ ವೆಂಕಟೇಶ ಆನ್ವರಿ,ಅನಂತಶಯನ,ಎ.ಈಶ್ವರ ವಿಶ್ವಕರ್ಮ,ಮನೋಹರ ಃಖಓಐ, ಮಲ್ಲಪ್ಪ,ಗಂಗಾಧರ,ಧರ್ಮಣ್ಣ ಗುಂಜಳ್ಳಿ,ಮಂಜುನಾಥ ಕೊಟ್ನೆಕಲ್, ದೇವರಾಜ ಮಸ್ಕಿ,ಅಮರೇಶ ಚಿಲ್ಕರಾಗಿ,ರಾಮಚಂದ್ರಪ್ಪ, ವಿಜಯಕುಮಾರ ಮಸ್ಕಿ,ಕಾಳಪ್ಪ ಮಸ್ಕಿ, ಡಾ ವೆಂಕಟೇಶ,ಮೌನೇಶ ತಡಕಲ್, ಷಣ್ಮುಖ ಆಚಾರಿ,ಅಮರನಾಥ ಮಾನ್ವಿ, ನಾಗರಾಜ ಪತ್ತಾರ,ಕೆ.ನರಸಪ್ಪ,ಪ್ರಕಾಶ, ಕೆ.ವೆಂಕಟೇಶ,ಗುರು ಮಾಡ್ಗಿಪೇಟೆ, ಸುರೇಶ,ಪ್ರಕಾಶ,ಅಮರೇಶ ಕಂಬಾರ, ಮಲ್ಲಿಕಾರ್ಜುನ,ರಾಮು,ಬ್ರಹ್ಮಯ್ಯ, ನಾಗರಾಜ,ರಾಮಕೃಷ್ಣ,ಮೌನೇಶ ವಡವಾಟಿ ಇನ್ನೂ ಮುಂತಾದವರು ಇದ್ದರು.

## ಸಮಸಮಾಜ ಕಟ್ಟುವಲ್ಲಿ ಕಾಯಕ ಶರಣರ ಕೊಡುಗೆ ಅಪಾರ: ತಹಶೀಲ್ದಾರ್ ಸುರೇಶ ವರ್ಮ

ನೈಜ್ಯ ದೆಸೆ ನ್ಯೂಸ್

**ರಾಯಚೂರು ಫೆಬ್ರವರಿ 10 (ಕರ್ನಾಟಕ ವಾರ್ತೆ): ಮೂಢನಂಬಿಕೆಗಳು, ಜಾತಿ ಪದ್ಧತಿ, ಅಸಮಾನತೆಯ ವಿರುದ್ಧ ವಚನಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸಿ, ಸಮಸಮಾಜ ಕಟ್ಟುವಲ್ಲಿ ಕಾಯಕ ನಿಷ್ಠೆ ಮೆರೆದ ಕಾಯಕ ಶರಣರ ಕೊಡುಗೆ ಅಪಾರ ಎಂದು ರಾಯಚೂರು ತಹಶೀಲ್ದಾರ್ ಸುರೇಶ ವರ್ಮ ಅವರು ಹೇಳಿದರು.**

ಫೆ.10ರ ಮಂಗಳವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಕಾಯಕ ಶರಣರ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಸರಳ ಜೀವನ, ಶುದ್ಧ ಧ್ಯಾನ, ನಿಷ್ಕಲ್ಮಶ ಭಕ್ತಿ ಮಾರ್ಗದಿಂದ ಮುಕ್ತಿ ಸಾಧ್ಯವೆಂದು ಸಾರಿದ ಕಾಯಕ ಶರಣರ ವಚನಗಳು



ಇಂದಿಗೂ ಚಿರಪರಿಚಿತವಾಗಿವೆ ಎಂದರು. ಈ ವೇಳೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಡಾ.ಶರಣಪ್ಪ ಅವರು ಮಾತನಾಡಿ, ಶರಣದ ವಚನಗಳು ಇಂದಿನ ಆಧುನಿಕ ಯುಗದಲ್ಲಿ ಅತ್ಯವಶ್ಯಕವಾಗಿವೆ. ಯುವ ಪೀಳಿಗೆ ಅವರ ಆದರ್ಶಗಳನ್ನು ಪಾಲಿಸಿ ಮುನ್ನಡೆಯಬೇಕಿದೆ ಎಂದರು.

ಈ ವೇಳೆ ಉಪನ್ಯಾಸಕರಾಗಿ ಯುವ ಸಾಹಿತಿಗಳಾದ ಈರಣ್ಣ ಬೆಂಗಾಲಿ ಅವರು ಮಾತನಾಡಿ, 12ನೇ ಶತಮಾನವು ಧಾರ್ಮಿಕ, ಸಾಮಾಜಿಕ, ರಾಜಕೀಯವಾಗಿ ಕ್ರಾಂತಿ ಉಂಟು ಮಾಡಿದೆ. ಇವತ್ತಿನ ನಮ್ಮ ಸಂವಿಧಾನದ ಪಾರ್ಲಿಮೆಂಟ್ ಮಾದರಿಯಲ್ಲಿ ಅಂದಿನ ಅನುಭವ ಮಂಟಪ ಇತ್ತು. ಯಾರನ್ನೂ ಕೀಳಾಗಿ ಕಾಣಬಾರದು ಎಂಬುವುದು ಬಸವೇಶ್ವರರ ಸಮಾನತೆಯ ತತ್ವವಾಗಿದ್ದು, ಅವರ ಹಾದಿಯಲ್ಲಿ ನಡೆದ ಕಾಯಕ ಶರಣರಾದ ಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಡೋಹರ ಕಕ್ಕಯ್ಯ, ಸಮಗಾರ ಹರಳಯ್ಯ ಮತ್ತು ಉರಿಲಿಂಗ ಪೆದ್ದಿಯವರು ಶರಣ ಪಡೆಯ ಮಹನೀಯರಾಗಿದ್ದಾರೆ ಎಂದು ಹೇಳಿದರು. ಕಾಯಕ ಶರಣರ ಭಾವಚಿತ್ರ ಮೆರವಣಿಗೆಗೆ ಚಾಲನೆ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಕಾಯಕ ಶರಣರ ಜಯಂತಿ ಅಂಗವಾಗಿ ಮಾದಾರ ಚನ್ನಯ್ಯ, ಮಾದಾರ ಧೂಳಯ್ಯ, ಡೋಹರ ಕಕ್ಕಯ್ಯ, ಸಮಗಾರ ಹರಳಯ್ಯ ಮತ್ತು ಉರಿಲಿಂಗ ಪೆದ್ದಿಯವರ ಭಾವಚಿತ್ರಕ್ಕೆ ರಾಯಚೂರು ತಹಶೀಲ್ದಾರ್ ಸುರೇಶ ವರ್ಮ ಅವರು ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು. ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಪ್ರಾರಂಭವಾದ ಮೆರವಣಿಗೆಯು ನಗರದ ಸಾರ್ವಜನಿಕ ಉದ್ಯಾನವನದ ಮಾರ್ಗವಾಗಿ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದವರೆಗೆ ನಡೆಯಿತು. ಮೆರವಣಿಗೆಯಲ್ಲಿ ವಿವಿಧ ಕಲಾತಂಡಗಳು ಭಾಗವಹಿಸಿದ್ದವು. ಇದೇ ಸಂದರ್ಭದಲ್ಲಿ ಸಮಾಜ ಮುಖಂಡರಾದ ರಾಜು, ಭೀಮಣ್ಣ, ಯಮೂನಪ್ಪ, ಹನುಮಂತು, ವೇಣುಗೋಪಾಲ, ಹನುಮಂತಪ್ಪ ಮನ್ನಾಪುರಿ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಇದ್ದರು.

## ಅನಧಿಕೃತ ವಸತಿ ಶಾಲೆಗಳ ವಿರುದ್ಧ ಕ್ರಮಕ್ಕೆ ಆಗ್ರಹ, ಮೂರನೇ ದಿನಕ್ಕೂ ಮುಂದುವರಿದ ಧರಣಿ ಸತ್ಯಾಗ್ರಹ.

ನೈಜ್ಯ ದೆಸೆ ನ್ಯೂಸ್

**ಮುದ್ದೇಬಿಹಾಳ: ತಾಲೂಕಿನ ವಿವಿಧ ಭಾಗಗಳಲ್ಲಿ ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಪರವಾನಿಗೆಗಳನ್ನು ರದ್ದುಗೊಳಿಸಿ, ನಿಯಮಬಾಹಿರವಾಗಿ ನಡೆಯುತ್ತಿರುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಪಟ್ಟಣದ ತಹಶಿಲ್ದಾರರ ಕಚೇರಿ ಆವರಣದಲ್ಲಿ ನಡೆಯುತ್ತಿರುವ ಧರಣಿ ಸತ್ಯಾಗ್ರಹ ಮೂರನೇ ದಿನಕ್ಕೆ ಕಾಲಿಟ್ಟಿದೆ.**

ವಿವಿಧ ಸಾಮಾಜಿಕ ಹಾಗೂ ದಲಿತಪರ ಸಂಘಟನೆಗಳ ಮುಖಂಡರು, ಹೋರಾಟಗಾರರು ಮತ್ತು ಸಾರ್ವಜನಿಕರು ಧರಣಿಯಲ್ಲಿ ಭಾಗವಹಿಸಿ ಮಕ್ಕಳ ಭದ್ರತೆ ಮತ್ತು ಶಿಕ್ಷಣದ ಗುಣಮಟ್ಟದ ಬಗ್ಗೆ ಆತಂಕ ವ್ಯಕ್ತಪಡಿಸಿದರು. ಸರ್ಕಾರದ ನಿಯಮಾನುಸಾರ ಅನುಮತಿ ಪಡೆಯದೆ




ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳು ಮಕ್ಕಳ ಭವಿಷ್ಯಕ್ಕೆ ಅಪಾಯಕಾರಿಯಾಗಬಹುದು ಎಂದು ಪ್ರತಿಭಟನಾಕಾರರು ತಿಳಿಸಿದ್ದಾರೆ. ವಸತಿ ಶಾಲೆಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳ ಕೊರತೆ, ಸುರಕ್ಷತಾ ಕ್ರಮಗಳ ಅಭಾವ ಮತ್ತು ಶಿಕ್ಷಣದ ಗುಣಮಟ್ಟದ ಬಗ್ಗೆ ಪ್ರಶ್ನೆಗಳು ಎದುರಾಗುತ್ತಿವೆ. ಆದ್ದರಿಂದ ಸಂಬಂಧಿತ ಇಲಾಖೆ ಅಧಿಕಾರಿಗಳು ತಕ್ಷಣ ಪರಿಶೀಲನೆ ನಡೆಸಿ ಅನಧಿಕೃತ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಈ ಕುರಿತು ತಹಶಿಲ್ದಾರರಿಗೆ ಮನವಿ ಸಲ್ಲಿಸಲಾಗಿದ್ದು, ಮಕ್ಕಳ ಹಿತದೃಷ್ಟಿಯಿಂದ ಹಾಗೂ ಕಾನೂನು ಪಾಲನೆಯ ದೃಷ್ಟಿಯಿಂದ ಸಮಸ್ಯೆಯನ್ನು ಶೀಘ್ರವಾಗಿ ಪರಿಹರಿಸುವಂತೆ ಆಗ್ರಹಿಸಲಾಗಿದೆ. ಅಧಿಕಾರಿಗಳು ತ್ವರಿತ ಕ್ರಮ ಕೈಗೊಳ್ಳದಿದ್ದರೆ ಹೋರಾಟವನ್ನು ಮುಂದಿನ ದಿನಗಳಲ್ಲಿ ಮತ್ತಷ್ಟು ತೀವ್ರಗೊಳಿಸುವುದಾಗಿ ಪ್ರತಿಭಟನಾಕಾರರು ಎಚ್ಚರಿಕೆ ನೀಡಿದ್ದಾರೆ. ಧರಣಿ ಸ್ಥಳದಲ್ಲಿ ಶಾಂತಿಯುತವಾಗಿ ಸತ್ಯಾಗ್ರಹ ಮುಂದುವರಿದಿದ್ದು, ಹೋರಾಟಗಾರರ ಆರೋಗ್ಯವನ್ನು 108 ಆಂಬುಲೆನ್ಸ್ ಸೇವಾ ಸಿಬ್ಬಂದಿ ಪರಿಶೀಲಿಸಿ ಆರೋಗ್ಯ ವಿಚಾರಿಸಿದರು. ಅಧಿಕಾರಿಗಳ ಸ್ಪಂದನೆಗಾಗಿ ಹೋರಾಟಗಾರರು ಕಾಯುತ್ತಿದ್ದಾರೆ.

ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾ ಅಧ್ಯಕ್ಷರಾದ ಬಾಲಚಂದ್ರ ಹುಲ್ಲೂರ, ಮಾರುತಿ ಸಿದ್ದಾಪೂರ, ರಾಜ್ಯ ಹೋರಾಟಗಾರರು ದುರಗಪ್ಪ ದೊಡಮನಿ, ಚಂದ್ರಶೇಖರ ಹಡಗಿನಾಳ, ಪರಸುರಾಮ ಹೊಸಮನಿ, ಸಂಗಮೇಶ ದೊಡಮನಿ, ಯಮನೂರಿ ಗುಡಿಹಾಳ, ರಾಘವೇಂದ್ರ ಮಾದರ, ಹಣಮಂತ ಶಿರೋಳ, ಪ್ರಕಾಶ ಹಾದಿಮನಿ, ಮುತ್ತಪ್ಪ ಪೂಜಾರಿ, ದೇವೇಂದ್ರ ಹೊಸಮನಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## SUDA ಅಧ್ಯಕ್ಷರಾದ ಶ್ರೀ ಬಾಬು ಗೌಡ ಬಾದರ್ಲಿ ಹಾಗೂ ಕಾಂಗ್ರೆಸ್ ಯುವ ಮುಖಂಡರಾದ ಮೌಲಾಸಾಬ್ ಅವರಿಂದ ವಾಸವಿ ನಗರಕ್ಕೆ ಸಾರ್ವಜನಿಕರ ಭೇಟಿ



ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಸಿಂಧನೂರು ನಗರದ ಸಮಗ್ರ ಅಭಿವೃದ್ಧಿಗೆ ಬದ್ಧರಾಗಿರುವ,ಜನಸಾಮಾನ್ಯರ ನಂಬಿಕೆಯ ನಾಯಕರು ಹಾಗೂ ನಗರ ಯೋಜನಾ ಅಭಿವೃದ್ಧಿ ಪ್ರಾಧಿಕಾರದ (SUDA) ಅಧ್ಯಕ್ಷರಾದ ಶ್ರೀ ಬಾಬು ಗೌಡ ಬಾದರ್ಲಿ ಅವರು ದಿನಾಂಕ 8 ಫೆಬ್ರವರಿ ಬೆಳಿಗ್ಗೆ ಸುಮಾರು 9:00 ಗಂಟೆಗೆ ನಗರದ ವಾರ್ಡ್ ಸಂಖ್ಯೆ 30ರ ವಾಸವಿ ನಗರ ಹಾಗೂ ಎಸ್.ಎಸ್.ಕ್ಯೂ ಕಾಲೋನಿಗೆ ಭೇಟಿ ನೀಡಿ ಜನರ ಕುಂದು ಕೊರತೆಗಳ ಕಾರ್ಯಕ್ರಮ ನಡೆಸಿದರು.**

ಈ ಸಂದರ್ಭದಲ್ಲಿ ಸ್ಥಳೀಯ ನಿವಾಸಿಗಳೊಂದಿಗೆ ನೇರ ಸಂವಾದ ನಡೆಸಿದ ಶ್ರೀ ಬಾಬು ಗೌಡ ಬಾದರ್ಲಿ ಅವರು, ವಾರ್ಡ್‌ನ ಪ್ರತಿಯೊಂದು ಗಲ್ಲಿಗಳಲ್ಲಿ ಸಂಚರಿಸಿ ಮೂಲಭೂತ ಸೌಕರ್ಯಗಳ ಸ್ಥಿತಿ ಪರಿಶೀಲಿಸಿದರು. ಕುಡಿಯುವ ನೀರು, ಒಳಚರಂಡಿ, ರಸ್ತೆ, ವಿದ್ಯುತ್ ದೀಪಗಳು, ಸ್ವಚ್ಛತೆ ಸೇರಿದಂತೆ ಹಲವು





ಸಮಸ್ಯೆಗಳ ಕುರಿತು ಸಾರ್ವಜನಿಕರು ಸಲ್ಲಿಸಿದ ಅಹವಾಲುಗಳನ್ನು ಸಹನಶೀಲತೆಯಿಂದ ಆಲಿಸಿದರು. ವಾರ್ಡ್ ನಿವಾಸಿಗಳು ಹಾಗೂ ಕಾಂಗ್ರೆಸ್ ಯುವ ಮುಖಂಡರಾದ ಮೌಲಾಸಾಬ್ ಅವರೊಂದಿಗೆ ಸೇರಿ, ಸ್ಥಳದಲ್ಲೇ GESCOM, ನಗರಸಭೆ ಹಾಗೂ ಪಿಡಬ್ಲ್ಯೂಡಿ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ ಅವರು, ಜನರಿಗೆ ತೊಂದರೆ ಉಂಟುಮಾಡುವ ಸಮಸ್ಯೆಗಳಿಗೆ ತಕ್ಷಣದ

> ವಾರ್ಡ್ ನಂಬರ್ 30ರ ನಿವಾಸಿಗಳಾದ ಮೌಲಾಸಾಬ್ ಅವರು ಮೊದಲಿನಿಂದಲೂ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಯುವ ಮುಖಂಡರಾಗಿ, ವಾರ್ಡ್‌ನ ಪ್ರತಿಯೊಂದು ಸಮಸ್ಯೆಯನ್ನು ಜನರ ಬಳಿ ಕುಳಿತು ಕೇಳಿ, ಶಾಸಕರ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದು ಬಗೆಹರಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತಿದ್ದಾರೆ. ಇಂದಿನ ರಾಜಕೀಯ ಪರಿಸ್ಥಿತಿಯಲ್ಲಿ ಹಲವರು ಚುನಾವಣೆಯ ಸಮಯಕ್ಕೆ ಮಾತ್ರ ಜನರ ಬಳಿ ಕಾಣಿಸಿಕೊಳ್ಳುವ ರಾಜಕಾರಣ ಮಾಡುತ್ತಿರುವಾಗ, ಮೌಲಾಸಾಬ್ ಅವರು ಯಾವುದೇ ಹುದ್ದೆ ಅಥವಾ ಅಧಿಕಾರದ ಆಸೆ ಇಲ್ಲದೆ, ಸೇವೆಯನ್ನೇ ರಾಜಕೀಯವನ್ನಾಗಿ ಮಾಡಿಕೊಂಡಿರುವ ಮುಖಂಡರು ಎಂಬುದು ವಾರ್ಡ್ ನಿವಾಸಿಗಳ ಅಭಿಪ್ರಾಯವಾಗಿದೆ.ಜನರ ಸಮಸ್ಯೆಗಳು ತೀವ್ರವಾಗಿದ್ದ ಸಂದರ್ಭದಲ್ಲಿ, ನಗರ ಯೋಜನಾ ಅಭಿವೃದ್ಧಿ ಪ್ರಾಧಿಕಾರದ (ಖಗಆಂ) ಅಧ್ಯಕ್ಷರಾದ ಶ್ರೀ ಬಾಬು ಗೌಡ ಬಾದರ್ಲಿ ಅವರಿಗೆ ಖುದ್ದಾಗಿ ಸಂಪರ್ಕಿಸಿ, ವಾಸವಿ ನಗರ ಹಾಗೂ ಎಸ್.ಎಸ್.ಕ್ಯೂ ಕಾಲೋನಿಗೆ ಭೇಟಿ ನೀಡುವಂತೆ ಮನವಿ ಮಾಡಿದವರು ಮೌಲಾಸಾಬ್ ಅವರೇ ಎಂಬುದು ಇಲ್ಲಿ ಗಮನಾರ್ಹ. ತಮ್ಮ ವೈಯಕ್ತಿಕ ರಾಜಕೀಯ ಲಾಭಕ್ಕಿಂತಲೂ ಜನರ ಹಿತಾಸಕ್ತಿಯನ್ನು ಮೊದಲಿಗಿಟ್ಟುಕೊಂಡು, ದೊಡ್ಡ ನಾಯಕರನ್ನು ವಾರ್ಡ್‌ಗೆ ಕರೆತಂದು ಜನರ ಸಮಸ್ಯೆಗಳನ್ನು ನೇರವಾಗಿ ತಿಳಿಸಲು ಸೇತುವೆಯಾಗಿ ಕಾರ್ಯನಿರ್ವಹಿಸಿದ್ದಾರೆ. ಈ ಮೂಲಕ ಮೌಲಾಸಾಬ್ ಅವರು ಕೇವಲ ಹೆಸರುಮಾತ್ರದ ಯುವ ಮುಖಂಡರಲ್ಲ, ಜನರ ನಾಡಿ ತಿಳಿದ ನೆಲದ ನಾಯಕರಾಗಿದ್ದಾರೆ ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದ್ದು, ಮುಂದಿನ ದಿನಗಳಲ್ಲಿ ಅವರ ರಾಜಕೀಯ ಭವಿಷ್ಯ ಇನ್ನಷ್ಟು ಬಲಿಷ್ಠವಾಗಲಿದೆ ಎಂಬುದು ನಮ್ಮ ಆಸೆ
> ––ವಾರ್ಡ್ ನಂಬರ್ 30 ನಿವಾಸಿಗಳು

ಪರಿಹಾರ ಒದಗಿಸುವಂತೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು."ಜನರ ಸಮಸ್ಯೆಗಳಿಗೆ ಕಚೇರಿಯಲ್ಲಿ ಕೂತು ಅಲ್ಲ, ಸ್ಥಳಕ್ಕೆ ಬಂದು ಪರಿಹಾರ ಕಂಡುಕೊಳ್ಳುವುದೇ ನಮ್ಮ ಆಡಳಿತದ ಧೋರಣೆ" ಎಂದು ಹೇಳುವ ಮೂಲಕ ತಮ್ಮ ಜನಪರ ನಿಲುವನ್ನು ಅವರು ಸ್ಪಷ್ಟಪಡಿಸಿದರು.

ಈ ಜನಸ್ಪಂದನ ಭೇಟಿ ವೇಳೆ ವಾರ್ಡ್ ನಂಬರ್ 30ರ ನಿವಾಸಿಗಳಾದ ರವಿಪ್ರಕಾಶ್ ಸರ್, ಡಾ. ಗುರುಪ್ರಸಾದ್ ಶೆಟ್ಟಿ, ಗೋಪಿ ಶೆಟ್ಟಿ, ಮೆಹಬೂಬ್ ಸಾಬ್, ಮೈಬೂಬ್ ಸಾಬ್ (ಕೆಎಸ್‌ಆರ್‌ಟಿಸಿ), ಖಾಜಾ ಮೋಹಿನುದ್ದೀನ್ ಅತ್ತಾರ,ಶರಣು, ಗೌಸ್ ಪೀರ್ ಖಾದ್ರಿ, ಝಾಕಿರ್, ಮೌಲಾಸಾಬ್, ಅಲಿ ಮೌಲಾಲಿ, ಶೇಖ್ ಶಾಕಿರ್ ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ನಾಗರಿಕರು ಉಪಸ್ಥಿತರಿದ್ದು, ತಮ್ಮ ಸಮಸ್ಯೆಗಳಿಗೆ ಸ್ಪಂದಿಸಿದ ನಾಯಕತ್ವಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.ನೀಡಲಾದ ಸೂಚನೆಗಳನ್ನು ಶೀಘ್ರ ಜಾರಿಗೆ ತರಲು ಭರವಸೆ ನೀಡಿದರು. ಶ್ರೀ ಬಾಬು ಗೌಡ ಬಾದರ್ಲಿ ಅವರ ಈ ಭೇಟಿ ಕೇವಲ ರಾಜಕೀಯ ಕಾರ್ಯಕ್ರಮವಲ್ಲ, ಜನರ ಬದುಕಿಗೆ ಸ್ಪಂದಿಸುವ ಜನಪರ ಆಡಳಿತದ ಪ್ರತಿಬಿಂಬವಾಗಿದ್ದು, ವಾಸವಿ ನಗರ ಹಾಗೂ ಎಸ್.ಎಸ್.ಕ್ಯೂ ಕಾಲೋನಿ ನಿವಾಸಿಗಳಲ್ಲಿ ಹೊಸ ನಿರೀಕ್ಷೆ ಮೂಡಿಸಿದೆ.

## 25 ನೇಯ ರಾಷ್ಟ್ರೀಯ ಮಟ್ಟದ ಓಪನ್ ಕರಾಟೆ ಚಾಂಪಿಯನ್ ಶಿಪ್ ಟೂರ್ನಮೆಂಟ್ ಶ್ರೀ ಸೂಗೂರೇಶ್ವರ ಕರಾಟೆ ಸಂಸ್ಥೆಯ ನೇತೃತ್ವ

ನೈಜ್ಯ ದೆಸೆ ನ್ಯೂಸ್

**ಶಕ್ತಿನಗರ: ಕರಾಟೆ ಒಂದು ಸಂಪೂರ್ಣ ಕಲಾ ಪ್ರಕಾರವಾಗಿದ್ದು, ಆತ್ಮರಕ್ಷಣೆ, ದೈಹಿಕ ಮತ್ತು ಮಾನಸಿಕ ತರಬೇತಿ, ಮತ್ತು ಸಾಂಸ್ಕೃತಿಕ ಪ್ರಜ್ಞೆಯನ್ನು ಒದಗಿಸುತ್ತದೆ ಹೃದಯ ಸಂಬಂಧಿ ಫಿಟ್ನೆಸ್, ನಮ್ಯತೆ ಮತ್ತು ಒಟ್ಟಾರೆ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ ಎಂದು ಶ್ರೀ ಸೂಗೂರೇಶ್ವರ ಕರಾಟೆ ಸಂಸ್ಥೆಯ ಸಂಸ್ಥಾಪಕರು ಹಾಗೂ ಮುಖ್ಯ ತರಬೇತಿದಾರದ ಸೂಗಪ್ಪ ಓ ಹೇಳಿದರು.**

ಅವರು ಭಾನುವಾರ 08-02-2026 ರಂದು ತೆಲಂಗಾಣ ರಾಜ್ಯ, ಮಕ್ತಲ್ ಜಿಲ್ಲಾ, ನಾರಾಯಣಪೇಟ್ ನ ವೆಂಕಟೇಶ್ವರ ಫಂಕ್ಷನ್ ಹಾಲ್ ನಲ್ಲಿ ಡ್ರ್ಯಾಗನ್ ಶೋಟೋಕಾನ್ ಕರಾಟೆ ಡೋ ಸ್ಪೋರ್ಟ್




ಸಹಯೋಗದಲ್ಲಿ ಆಯೋಜಿಸಿದ 25 ನೇಯ ರಾಷ್ಟ್ರೀಯ ಮಟ್ಟದ ಓಪನ್ ಕರಾಟೆ ಚಾಂಪಿಯನ್ ಶಿಪ್ ಟೂರ್ನಮೆಂಟ್ ಭಾಗವಹಿಸಿ ಮಾತನಾಡಿ ಓಪನ್ ಕರಾಟೆ ಚಾಂಪಿಯನ್ ಶಿಪ್ ಟೂರ್ನಮೆಂಟ್ ಕಟಾ ವಿಭಾಗದಲ್ಲಿ ಒಟ್ಟು ಸ್ಪರ್ದಿಗಳು 18 ಸ್ಪರ್ಧಿಗಳು ವಿಜೇತರಾದರು 1 ನೇ ಸ್ಥಾನಕ್ಕೆ 09 ಸ್ಪರ್ಧಿಗಳು, 2 ನೇ ಸ್ಥಾನಕ್ಕೆ 06 ಸ್ಪರ್ಧಿಗಳು, 3 ನೇ ಸ್ಥಾನಕ್ಕೆ 03 ಸ್ಪರ್ಧಿಗಳು ವಿಜೇತರಾದರು, ಒಟ್ಟು 05 ಗ್ರ್ಯಾಂಡ್ ಚಾಂಪಿಯನ ಶಿಪ್ ಪದಕ ಪಡೆದುಕೊಂಡಿದ್ದಾರೆ ಭಾರತದಲ್ಲಿ ಕ್ರೀಡೆಯನ್ನು ಉತ್ತೇಜಿಸಲು ರಾಷ್ಟ್ರೀಯ ಕ್ರೀಡಾ ಫೆಡರೇಶನ್ ಇದೆ ಇದು ಭಾರತ ಸರ್ಕಾರದ ಯುವಜನ ಸೇವೆ ಮತ್ತು ಕ್ರೀಡಾ ಸಚಿವಾಲಯದಿಂದ ಗುರುತಿಸಲ್ಪಟ್ಟಿದೆ ಇದು ಶಿಸ್ತು, ಗೌರವ ಮತ್ತು ಜವಾಬ್ದಾರಿ ಕಲಿಸುತ್ತದೆ ಇದನ್ನು ಕ್ರೀಡೆಯಾಗಿ ಏಷ್ಯನ್ ಗೇಮ್ಸ್‌ಗಳಂತಹ ದೊಡ್ಡ ಪಂದ್ಯಾವಳಿಗಳಲ್ಲಿ ಸೇರಿಸಲಾಗಿದೆ ಮತ್ತು ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧೆಗಳು ನಡೆಯುತ್ತವೆ ಎಂದುತಿಳಿಸಿದರು.

ಈ ಟೂರ್ ಮೆಂಟ್ ನಲ್ಲಿ ಸಹ ತರಬೇತಿದಾರಾದ ಪ್ರಕಾಶ್ ಓ, ಮಹೇಂದ್ರ, ಮಲ್ಲೇಶ, ಸಾಯಿ ಕುಮಾರ್, ನಾಗರಾಜ್, ಕೆಪಿಸಿಎಲ್ ನ ಡಿ ಎ ವಿ ಸ್ಕೂಲ್ ಶಕ್ತಿನಗರ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ದೇವಸೂಗೂರು ಮಕ್ಕಳು ಬಹಳ ಅತ್ಯುತ್ಸಾಹದಿಂದ ಪಂದ್ಯಾವಳಿಗಳಲ್ಲಿ ಭಾಗವಹಿಸಿದ್ದರು. ಪಾಲಕರ ಪೋಷಕರ ಪ್ರೋತ್ಸಾಹ ದೊಂದಿಗೆ ಕಾರ್ಯಕ್ರಮ ಯಶಸ್ವಿಯಾಯಿತು.